ಕ್ರಾಂತಿಯ ಕಿಡಿ

# ಕಾಯಕ ಯೋಗಿ

ಸಂಪಾದಕರು : ಬಿ.ಕೆ. ಅರುಣಜ್ಯೋತಿ

KAYAKAYOGI - Morning Daily

ಕನ್ನಡ ದಿನಪತ್ರಿಕೆ

E- mail: kayakayoginews@gmail.com

RNI No. KARKAN/2018/77505
POST NO. KA/SK/MND/999/2019-2021

ಮಂಡ್ಯ Mandya | ಸಂಪುಟ -04 Volume -04 | ಸಂಚಿಕೆ - 266 Issue- 266 | ಬುಧವಾರ Wednesday | 09-02-2022 | ಪುಟ -04 Page -04 | ಬೆಲೆ -02 Price -02 | ಸಂಪರ್ಕ 9980605484



ಪರಿಸರ, ಪ್ರವಾಸೋದ್ಯಮ, ಆರೋಗ್ಯ, ವ್ಯವಹಾರ, ಕೃಷಿ, ಶಿಕ್ಷಣ, ಜೀವನ ಶೈಲಿ, ಸಂಸ್ಕೃತಿ, ವನ್ಯಜೀವಿಗಳು, ಸಾಧಕರು, ವ್ಯವಹಾರ ಹಾಗೂ ಉತ್ಪನ್ನಗಳ ಮಾಹಿತಿ, ಸುದ್ದಿ ಮತ್ತು ಜಾಹಿರಾತುಗಳು.

DIGITAL MEDIA
askmysuru.com

9742 9742 34 askmysuru


# ಕ್ಯಾನ್ಸರ್ ರೋಗಿಗಳಿಗೆ ಉಚಿತವಾಗಿ ಶರಣ್ಯ ಸಂಸ್ಥೆಯಿಂದ ಆರೈಕೆ

ಶರಣ್ಯ.... ಕಳೆದ ಹದಿನೇಳು ವರ್ಷಗಳಿಂದ ರಾಷ್ಟ್ರದ ಯಾವುದೇ ಮೂಲೆಯಿಂದ ಬರುವ ಕ್ಯಾನ್ಸರ್ ಪೀಡಿತ ರೋಗಿಗಳಿಗೆ ಉಚಿತವಾಗಿ ಶುಶ್ರೂಷೆ ಮಾಡುವ ಸೇವಾ ಸಂಸ್ಥೆ. ಇದು ಶಿವಮೊಗ್ಗ ಜಿಲ್ಲೆ ಗಾಜನೂರು ಅಗ್ರಹಾರ ಗ್ರಾಮದಲ್ಲಿದೆ.

ಕ್ಯಾನ್ಸರ್ ರೋಗಿಗಳಿಗೆ ಗೃಹ ಶುಶ್ರೂಷಕಿಯಾಗಿ ಸೇವೆ, ಪಾಲಕರಿಲ್ಲದ ಮಕ್ಕಳಿಗೆ ಆಶ್ರಯ, ಹಿರಿಯ ನಾಗರೀಕರ ಯೋಗಕ್ಷೇಮ, ಅಸಹಾಯಕ ಸ್ತ್ರೀಯರಿಗೆ ಆಶ್ರಯ.....ಇವಿಷ್ಟು ಶರಣ್ಯ ನೋವು ಉಪಶಮನ ಆರೈಕೆ ಮತ್ತು ಸಂಶೋಧನಾ ಕೇಂದ್ರದಿಂದ ದೊರಕುತ್ತಿರುವ ಸೇವೆಗಳು.

ಆರೈಕೆ, ಆಶ್ರಯ ಮತ್ತು ಆಧ್ಯಾತ್ಮಿಕತೆ ನೀಡಿ ಧೈರ್ಯ ಮತ್ತು ಆತ್ಮಸ್ಥೈರ್ಯ ತುಂಬುವ ಮಾನವೀಯ ಸೇವೆಯನ್ನು ನಡೆಸಿಕೊಂಡು ಬರಲಾಗುತ್ತಿದೆ. ಈ



ಸಂಸ್ಥೆಯು ಡಿಎಸ್ಎಲ್ ಟ್ರಸ್ಟ್ ನ ಸೇವಾ ಯೋಜನೆ ಆಗಿದೆ.

ಶರಣ್ಯಾ ಸಂಸ್ಥೆಯ ಮೂಲ ಉದ್ದೇಶ ಮತ್ತು ಗುರಿ ಬಹಳ ವಿಶಾಲ ಮನೋಭಾವದ್ದಾಗಿದೆ ಪ್ರತಿಯೊಬ್ಬ ಒಳರೋಗಿಯಾಗಿ ಬಂದವರು ಗೌರವಯುತವಾಗಿ ತಮ್ಮ ಉಳಿದ ಜೀವಿತಾವಧಿಯನ್ನು ಅನುಭವಿಸಬೇಕು , ಅಲ್ಲದೆ ಉತ್ತಮ ಸೌಕರ್ಯಗಳನ್ನು ಹೊಂದಿ ತನ್ನ ಅಂತಿಮ ದಿನಗಳಲ್ಲಿ ನೆಮ್ಮದಿಯ ತಾಣಕ್ಕೆ ಸೇರುವುದಕ್ಕೆ ಭಗವಂತನನ್ನು ಸ್ಮರಿಸುವಂತಾಗಬೇಕು. ಒಂಟಿತನವನ್ನು ಹೋಗಲಾಡಿಸಿ ತನ್ನ ಎಲ್ಲ ಸಿಬ್ಬಂದಿಯೊಂದಿಗೆ ಪ್ರೀತಿಯ ವಾತಾವರಣ ನೀಡಿ ಒಬ್ಬ ರೋಗಿಗೆ, ಅಸಹಾಯಕರಿಗೆ ಹಿಂದೆಂದೂ ದೊರೆಯದಂತಹ ಸಂಬಂಧದ ಅನುಭವವನ್ನು ನೀಡುವುದೇ ಸಂಸ್ಥೆಯ ಮೂಲ ಉದ್ದೇಶ.

ಸಂಸ್ಥೆಯು ರೋಗಿಗಳಿಗೆ ಯಾವುದೇ ಫಲಾಪೇಕ್ಷೆಯಿಲ್ಲದೆ ಉಚಿತವಾಗಿ ಸೇವೆಯನ್ನು ನೀಡುತ್ತದೆ. ಪ್ರಾರಂಭಿಕ ಹಂತದಲ್ಲಿ ಒಂಭತ್ತು ಜನರಿಗೆ ಯೋಜನೆ ರೂಪಿಸಿದ್ದು, ಪ್ರಸ್ತುತ ಸುಸಜ್ಜಿತ ಸ್ವಚ್ಛವಾಗಿರುವ 2ವಾರ್ಡ್ ಗಳನ್ನು ನಿರ್ಮಿಸಿ ಇಪ್ಪತ್ತು ಒಳ ರೋಗಿಗಳಿಗೆ ಆಶ್ರಯ ನೀಡಿ ಆರೈಕೆ ಶುಶ್ರೂಷೆ ನೀಡಲಾಗುತ್ತಿದೆ. ಚಿಕಿತ್ಸೆಗೆ ಮಿತಿ ಇದ್ದರೂ ಆರೈಕೆಗೆ ಮಿತಿ ಇಲ್ಲ ಎಂಬ ಮೂಲ ಮಂತ್ರ ಇದರ ಧ್ಯೇಯವಾಗಿದೆ.

ಶರಣ್ಯ ತಂಡವು ನುರಿತ ಶುಶ್ರೂಷಕರು, ರೋಗಿಗಳ ಸಲಹಾ ಸದಸ್ಯರು, ಕೌಟುಂಬಿಕ ಸಲಹಾ ಸದಸ್ಯರು ಮತ್ತು ಆಧ್ಯಾತ್ಮಿಕತೆ ನೀಡುವವರನ್ನು ಒಳಗೊಂಡಿರುತ್ತದೆ.

ಶರಣ್ಯದ ಸೇವೆ ಕುಟುಂಬದವರನ್ನು ಹೊರತುಪಡಿಸಿ ಸಂಪೂರ್ಣ ಗೌಪ್ಯ ಪುಟ-4

# ಮಂಡ್ಯದಲ್ಲಿ ಹಿಜಬ್ ಕೇಸರಿ ಫೈಟ್

## ಅಲ್ಲಾ ಹು ಅಕ್ಬರ್-ಜೈ ಶ್ರೀರಾಮ್ ಘೋಷಣೆ : ಪಿಇಎಸ್ ಕಾಲೇಜು ಆವರಣದಲ್ಲಿ ತಿಕ್ಕಾಟ : ಡಿಸಿ ಕಚೇರಿ ಬಳಿ ಪ್ರತಿಭಟನೆ

**ಮಂಡ್ಯ :** ರಾಜ್ಯಾದ್ಯಂತ ತೀವ್ರ ವಿವಾದಕ್ಕೆ ಕಾರಣವಾಗಿರುವ ಹಿಜಬ್-ಕೇಸರಿ ಸಂಘರ್ಷ ಜಿಲ್ಲೆಯಲ್ಲಿ ತಾರಕಕ್ಕೇರಿದ್ದು ಬುರ್ಖಾ ಧರಿಸಿ ಕಾಲೇಜಿಗೆ ಬಂದ ವಿದ್ಯಾರ್ಥಿನಿ ಹಾಗೂ ಕೇಸರಿ ಶಾಲು ಧರಿಸಿದ ವಿದ್ಯಾರ್ಥಿಗಳ ನಡುವೆ ಸಂಘರ್ಷ ನಡೆದು ಮಂಡ್ಯ ಡಿಸಿ ಕಚೇರಿ ಬಳಿ ಪ್ರತಿಭಟನೆ ನಡೆಯಿತು.

ನಗರದ ಪಿಇಎಸ್ ಪದವಿ ಕಾಲೇಜಿಗೆ ಮಂಗಳವಾರ 100ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾಲೇಜಿಗೆ ಕೇಸರಿ ಶಾಲು ಧರಿಸಿ ಬಂದಿದ್ದರು. ಕಾಲೇಜು ಗೇಟ್‌ನಲ್ಲೇ ಕೆಲ ವಿದ್ಯಾರ್ಥಿಗಳು ಇತರ ವಿದ್ಯಾರ್ಥಿಗಳಿಗೆ ಶಾಲು ವಿತರಣೆ ಮಾಡುತ್ತಿದ್ದರು. ಈ ವೇಳೆ ಬುರ್ಖಾ, ಹಿಜಾಬ್ ಧರಿಸಿದ ವಿದ್ಯಾರ್ಥಿನಿಯೊಬ್ಬರು ಸ್ಕೂಟರ್‌ನಲ್ಲಿ ಬಂದರು. ಇದನ್ನು ಕಂಡ ವಿದ್ಯಾರ್ಥಿಗಳು ಘೋಷಣೆಯನ್ನು ತೀವ್ರಗೊಳಿಸಿದರು.

ಇದರಿಂದ ಪ್ರಚೋದನೆಗೆ ಒಳಗಾದ ವಿದ್ಯಾರ್ಥಿನಿ ಸಹ 'ಅಲ್ಲಾ ಹು ಅಕ್ಬರ್' ಎಂದು ಘೋಷಣೆ ಕೂಗಿದರು. ನಂತರ ಕೇಸರಿ ಶಾಲು ಧರಿಸಿದ್ದ ವಿದ್ಯಾರ್ಥಿಗಳು 'ಜೈಶ್ರೀರಾಮ್' ಕೂಗು ಜೋರಾಯಿತು. ವಿದ್ಯಾರ್ಥಿನಿಯೂ ಘೋಷಣೆ ಮುಂದುವರಿಸಿದರು. 'ಬುರ್ಖಾ ತೆಗೆಯಿರಿ ಎಂದು ಹೇಳಲು ಅವರು ಯಾರು, ಅವರಿಗೆ ಏನು ಹಕ್ಕಿದೆ' ಎಂದು ಪ್ರಶ್ನಿಸಿದರು.



ಇದರಿಂದ ಕೆರಳಿದ ವಿದ್ಯಾರ್ಥಿಗಳು ಆಕೆಯತ್ತ ನುಗ್ಗಿ ಬಂದರು. ತಕ್ಷಣವೇ ಎಚ್ಚೆತ್ತುಕೊಂಡ ಕಾಲೇಜು ಸಿಬ್ಬಂದಿ ವಿದ್ಯಾರ್ಥಿಗಳ ಗುಂಪು ತಡೆದರು, ನಂತರ ಪೊಲೀಸರು ಸ್ಥಳಕ್ಕೆ ಬಂದು ಗುಂಪು ಚದುರಿಸಿ ಪರಿಸ್ಥಿತಿಯನ್ನು ನಿಯಂತ್ರಿಸಿದರು.

'ಕಾಲೇಜಿನ ಹೊರಾವರಣದಲ್ಲಿ ಘಟನೆ ನಡೆದಿದೆ. ಸಮವಸ್ತ್ರ ಹೊರತುಪಡಿಸಿ ಬೇರೆ ಯಾವುದೇ ಉಡು ಪು ಧರಿಸಿ ಬಂದ ವಿದ್ಯಾರ್ಥಿಗಳನ್ನು ತರಗತಿಗೆ ಸೇರಿಸಿಲ್ಲ' ಎಂದು ಪ್ರಾಚಾರ್ಯ ಡಾ.ಜೆ. ಮಹಾದೇವ ತಿಳಿಸಿದರು.

**ಪ್ರತಿಭಟನೆ:** ಮಂಡ್ಯ ವಿಶ್ವವಿದ್ಯಾಲಯ, ಪಿಇಎಸ್ ಪದವಿ ಕಾಲೇಜು ಸೇರಿದಂತೆ ವಿವಿಧ ಕಾಲೇಜು ವಿದ್ಯಾರ್ಥಿಗಳು ಕೇಸರಿ ಶಾಲು ಧರಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು. 'ನಾವೆಲ್ಲಾ ಒಂದು, ನಾವೆಲ್ಲಾ ಹಿಂದೂ' ಎಂದು ಘೋಷಣೆ ಕೂಗಿದರು. ಹಿಜಾಬ್ ತೆಗೆಯುವವರೆಗೂ ನಾವು ಕೇಸರಿ ಶಾಲು ತೆಗೆಯುವುದಿಲ್ಲ ಎಂದು ಸವಾಲು ಹಾಕಿದರು. ಕೆ.ಆರ್.ಪೇಟೆ, ಶ್ರೀರಂಗಪಟ್ಟಣದಲ್ಲೂ ಪ್ರತಿಭಟನೆಗಳು ನಡೆದವು.

# ಇಂದು ಹಿಜಾಬ್ 'ಹೈ' ಆದೇಶ!

## 3ದಿನ ಶಾಲಾ-ಕಾಲೇಜಿಗೆ ರಜೆ




**ಬೆಂಗಳೂರು:** ತೀವ್ರ ಕುತೂಹಲ ಕೆರಳಿಸಿದ್ದ ಹಿಜಾಬ್ ವಿವಾದ ವಿಚಾರಣೆಯನ್ನು ಹೈಕೋರ್ಟ್ ನಾಳೆಗೆ ಮುಂದೂಡಿದೆ. ತೀವ್ರವಾದ ವಾದದ ನಡು ವೆ ಇಂದು ನ್ಯಾಯಮೂರ್ತಿ ಕೃಷ್ಣ ಭಟ್ ನೇತೃತ್ವದ ಏಕಸದಸ್ಯ ಪೀಠ ವಿಚಾರಣೆ ನಾಳೆ ಮಧ್ಯಾಹ್ನ 2.30 ಮುಂದೂಡಿದೆ.

ರಾಜ್ಯದ ಕಾಲೇಜುಗಳಲ್ಲಿ ಹಿಜಾಬ್ ಮತ್ತು ಕೇಸರಿ ಶಾಲು ವಿವಾದ ತೀವ್ರ ಸ್ವರೂಪ ಪಡೆದು ಕೊಂಡಿದ್ದು, ರಾಜ್ಯದ ಬಹುತೇಕ ಜಿಲ್ಲೆಗಳ ಕಾಲೇಜು ಗಳಿಗೆ ಹಿಜಾಬ್ ವಿವಾದ ವ್ಯಾಪಿಸಿದೆ. ಇದರ ಬೆನ್ನ ಲ್ಲೇ ಹಿಜಾಬ್ ಧರಿಸಲು ನಿರ್ಬಂಧ ವಿಧಿಸಿರುವುದನ್ನು ಪ್ರಶ್ನಿಸಿ ಉಡುಪಿ ಮೂಲದ ವಿದ್ಯಾರ್ಥಿನಿಯರು ಮತ್ತು ಪೋಷಕರು ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದರು. ಇಂದು ಮೂರು ಪ್ರತ್ಯೇಕ ಅರ್ಜಿ ಸಲ್ಲಿಸಲಾಗಿದ್ದು, ಇಂದು ಹೈಕೋರ್ಟ್‌ನ ಏಕಸದಸ್ಯ ಪೀಠದಲ್ಲಿ ವಿಚಾರಣೆ ನಡೆಯಿತು. ವಾದ-ಪ್ರತಿವಾದಗಳನ್ನು ಆಲಿಸಿದ ನ್ಯಾ.ಕೃಷ್ಣ ದೀಕ್ಷಿತ್ ನಾಳೆ ಮಧ್ಯಾಹ್ನ 2.30ಕ್ಕೆ ವಿಚಾರಣೆ ಮುಂದೂಡಿದರು.

**ರಜೆ ಘೋಷಣೆ :** ಮುಂದಿನ ಮೂರು ದಿನಗಳ ಕಾಲ ಶಾಲಾ-ಕಾಲೇಜು ಗಳಿಗೆ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ರಜೆ ಘೋಷಿಸಿದ್ದಾರೆ. ನವದೆಹಲಿಯಲ್ಲಿರುವ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಈ ಆದೇಶ ನೀಡಿದ್ದು, ರಾಜ್ಯದಲ್ಲಿ ಶಾಂತಿ ಕಾಪಾಡುವಂತೆ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ ಹಾಗೂ ರಾಜ್ಯದ ಸಮಸ್ತ ಜನತೆ ಸಹಕರಿಸುವಂತೆ ಅವರು ಮನವಿ ಮಾಡಿದ್ದಾರೆ.

## ಚುಟುಕು ಸುದ್ದಿ

### ಫೆ.11ರಂದು ವಿದ್ಯುತ್ ಸುರಕ್ಷತಾ ಅರಿವು

**ಮಂಡ್ಯ :** ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿನ ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರ ತಿಳುವಳಿಕೆಗಾಗಿ ಫೆ.09 ಹಾಗೂ ಫೆ.11ರಂದು ವಿದ್ಯುತ್ ಸುರಕ್ಷಾತ ಅರಿವು ಸಪ್ತಾಹವನ್ನು ಆಯೋಜಿಸಲಾಗಿದೆ.

ಫೆ.09 ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 12.30 ರ ವರೆಗೆ ಎಂ.ಸಿ. ರಸ್ತೆ, ಶುಗರ್ ಟೌನ್, ಗುತ್ತಲು, ಹೊಸಹಳ್ಳಿ, ಕೊತ್ತತ್ತಿ, ಬಸರಾಳು ಗ್ರಾಮ ಹಾಗೂ ಫೆ.11ರಂದು ಬೆಳಿಗ್ಗೆ 11.30 ರಿಂದ 12.30 ರ ವರೆಗೆ ಶಿವಳ್ಳಿ, ಕೆರಗೋಡು, ಮಧ್ಯಾಹ್ನ 2 ಗಂಟೆಯಿಂದ 3 ಗಂಟೆಯವರೆಗೆ ದುದ್ದ ಹಾಗೂ 3 ರಿಂದ 4 ಗಂಟೆಯವರೆಗೆ ತಗ್ಗಹಳ್ಳಿ, ವಿ.ಸಿ.ಫಾಂ, ಕೀಲಾರ, ಸಾತನೂರು ಮತ್ತು ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿನ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಲು ಮಂಡ್ಯ ವಿಭಾಗದ ಸೆಸ್ಕ್‌ನ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಪರಿಚಿತ ಶವ ಪತ್ತೆ

**ಮಂಡ್ಯ :** ಮಂಡ್ಯ ಜುಬಲಿ ಪಾರ್ಕಿನ ಒಳಗಡೆ ಇರುವ ಮೋರಿ ಪಕ್ಕದಲ್ಲಿ ಒಬ್ಬ 30-35 ವರ್ಷ ವಯಸ್ಸಿನ ಅಪರಿಚಿತ ಮಹಿಳೆಯು ಜ. 7 ರಂದು ಬೆಳಿಗ್ಗೆ ಸುಮಾರು 11 ಗಂಟೆಯಲ್ಲಿ ಮೃತಪಟ್ಟಿರುತ್ತಾರೆ ಎಂದು ಪೂರ್ವ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಅನಾಮಧೇಯ ಮೃತ ಮಹಿಳೆ ತೆಳು ನೀಲಿ-ಕಪ್ಪು ಮತ್ತು ಬಿಳಿ ಮಾಸಲು ಬಣ್ಣದ ಹೂವುಳ್ಳ ಟೀ ಶರ್ಟ್, ತೆಳು ನೀಲಿ ಬಣ್ಣದ ಪ್ಯಾಂಟ್ ಇರುತ್ತದೆ. ವಾರಸುದಾರರು ಇದ್ದಲ್ಲಿ ಮಂಡ್ಯ ಪೂರ್ವ ಪೋಲಿಸ್ ಠಾಣೆಯನ್ನು ಸಂಪರ್ಕಿಸಬಹುದು.

# ಹೆಣ್ಣುಮಕ್ಕಳಿಗೆ ಆತ್ಮರಕ್ಷಣಾ ತರಬೇತಿ ಅತ್ಯಗತ್ಯ

## ಸಚಿವ ಕೆ.ಗೋಪಾಲಯ್ಯ ಅಭಿಮತ

**ಮಂಡ್ಯ :** ಪ್ರಸ್ತುತದಲ್ಲಿ ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯವನ್ನು ತಡೆಗಟ್ಟುವ ಸಲುವಾಗಿ ಹಾಗೂ ಅವರ ಸುರಕ್ಷತೆಗಾಗಿ ಆತ್ಮರಕ್ಷಣಾ ತರಬೇತಿಗಳು ಬಹಳ ಮುಖ್ಯ ಎಂದು ಅಬಕಾರಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಗೋಪಾಲಯ್ಯ ಹೇಳಿದರು.

ನಗರದ ಡಾ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಹೆಣ್ಣುಮಕ್ಕಳ ಆತ್ಮರಕ್ಷಣೆಗಾಗಿ, ಓಬವ್ವ ಆತ್ಮರಕ್ಷಣಾ ಕಲೆಯ ಕಾರ್ಯಕ್ರಮವನ್ನು ವರ್ಚುವಲ್ ಮುಖಾಂತರ ಉದ್ಘಾಟಿಸಿ ಮಾತನಾಡಿದ ಅವರು ಹೆಣ್ಣುಮಕ್ಕಳ ಮೇಲೆ ನಡೆಯುವ ಅತ್ಯಾಚಾರ, ದೌರ್ಜನ್ಯಗಳನ್ನು ಗಮನದಲ್ಲಿರಿಸಿಕೊಂಡು ಹೆಣ್ಣು ಮಕ್ಕಳು ತಮ್ಮನ್ನು ತಾವು ರಕ್ಷಿಸಿಕೊಳ್ಳುವಲ್ಲಿ, ಮಾನಸಿಕವಾಗಿ ಹಾಗೂ ದೈಹಿಕವಾಗಿ ಸಮರ್ಥರನ್ನಾಗಿ ಮಾಡುವ ಉದ್ದೇಶದಿಂದಾಗಿ ಓಬ್ಬವ್ವ ಆತ್ಮರಕ್ಷಣಾ ಕಲೆಯನ್ನು ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿಯೂ ಅನುಷ್ಠಾನ ಮಾಡಲಾಗುತ್ತಿದೆ ಎಂದರು.

ಸರ್ಕಾರದ ಈ ಯೋಜನೆ ಪುಟ-4



**ಮಂಡ್ಯದ ಡಾ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ವಸತಿ ಶಾಲೆಗಳಲ್ಲಿರುವ ವಿದ್ಯಾರ್ಥಿನಿಯರಿಗೆ ಆತ್ಮರಕ್ಷಣೆಗಾಗಿ ಕರಾಟೆ ಓಬವ್ವ ಆತ್ಮರಕ್ಷಣಾ ಕಲೆ ತರಬೇತಿ ನೀಡುವ ಯೋಜನೆ ಕಾರ್ಯಕ್ರಮದಲ್ಲಿ ಕರಾಟೆ ಕಲಿಕೆ ಪ್ರದರ್ಶನ ನಡೆಯಿತು.**

# ನರೇಗಾ ಗ್ರಾಮೀಣ ಜನತೆ ಜೀವನ ಭದ್ರತೆ

**ಮಂಡ್ಯ :** ಗ್ರಾಮೀಣ ಬಡಜನರ ಜೀವನೋಪಾಯ ಮಟ್ಟವನ್ನು ಸುಧಾರಿಸುವುದು ನರೇಗಾ ಯೋಜನೆಯ ಗುರಿಯಾಗಿದೆ. ಈ ನಿಟ್ಟಿನಲ್ಲಿ ಪ್ರತಿ ಕುಟುಂಬಕ್ಕೆ ಕನಿಷ್ಟ ನೂರು ದಿನಗಳ ಉದ್ಯೋಗ ನೀಡುವ ಮೂಲಕ ಜನರ ಜೀವನಕ್ಕೆ ಭದ್ರತೆ ನೀಡಲಾಗುತ್ತಿದೆ ಎಂದು ಮುಖ್ಯಕಾರ್ಯನಿರ್ವಾಹಕಾಧಿಕಾರಿಗಳಾದ ದಿವ್ಯ ಪ್ರಭು ರವರು ಹೇಳಿದರು.

ಮಂಡ್ಯ ತಾಲ್ಲೂಕು ತಗ್ಗಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುತ್ತಿರುವ ಕೂಲಿಕಾರರಿಗೆ ಏರ್ಪಡಿಸಿದ್ದ ಆರೋಗ್ಯ ಶಿಬಿರ ಕಾರ್ಯಕ್ರಮ ಹಾಗೂ ನರೇಗಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನರೇಗಾ ಕೂಲಿಕಾರರ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿದೆ. ಪ್ರತಿಯೊಬ್ಬರು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದರು.



ಮಹಿಳೆಯರಿಗೆ, ಪುರುಷರಿಗೆ ಸಮಾನ ಕೂಲಿ, ಕೆಲಸಕ್ಕೆ ಬೇಡಿಕೆ ಸಲ್ಲಿಸಿದ ಹದಿನೈದು ದಿನದೊಳಗೆ ಉದ್ಯೋಗ ನೀಡಲಾಗುವುದು ತೋಟಗಾರಿಕೆ, ಕೃಷಿ, ರೇಷ್ಮೆ, ಅರಣ್ಯ ಇಲಾಖೆಗಳಡಿ ಕಾಮಗಾರಿಗಳನ್ನು ನರೇಗಾ ಯೋಜನೆಯಡಿ ಬಳಕೆ ಮಾಡಿಕೊಳ್ಳಬಹುದು ಎಂದು ತಿಳಿದರು.

ಆರೋಗ್ಯ ತಪಾಸಣಾ ಶಿಬಿರದಲ್ಲಿ ಸುಮಾರು 50ಕ್ಕೂ ಹೆಚ್ಚು ಕೂಲಿಕಾರರಿಗೆ ತಪಾಸಣೆ ಮಾಡಲಾಯಿತು. ಈ ವೇಳೆ ನರೇಗಾ ಪುಟ-4

## ಮಂಡ್ಯ ಕೊರೊನಾ ಮೀಟರ್

**ಕೊರೊನಾ ಸೋಂಕು : 45**

**ಸಾವು : 01**



**ಮಂಡ್ಯ:** ಜಿಲ್ಲೆಯ ವಿವಿಧ ತಾಲ್ಲೂಕುಗಳ 45 ಮಂದಿಗೆ ಶುಕ್ರವಾರ ಕೊರೋನಾ ಸೋಂಕು ದೃಢಪಟ್ಟಿದೆ.
ರೋಗಿಗಳಿಗೆ ಆಸ್ಪತ್ರೆ ಹಾಗೂ ಕೋವಿಡ್ ಸೆಂಟರ್‌ನಲ್ಲಿ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಮಂಡ್ಯ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಪ್ರಕಣೆಯಲ್ಲಿ ತಿಳಿಸಿದ್ದಾರೆ. ಸೋಂಕಿನಿಂದ ಒಬ್ಬರು ಮೃತಪಟ್ಟಿದ್ದಾರೆ.

ಮಂಡ್ಯ-12, ಮದ್ದೂರು-06, ಮಳವಳ್ಳಿ-08, ಪಾಂಡವಪುರ-05, ಶ್ರೀರಂಗಪಟ್ಟಣ-01, ಕೆ.ಆರ್.ಪೇಟೆ-01, ನಾಗಮಂಗಲ-12 ಮಂದಿಗೆ ಕರೋನಾ ಸೋಂಕು ಕಾಣಿಸಿಕೊಂಡಿದೆ. ಈ ದಿನ 485 ಮಂದಿ ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಜಿಲ್ಲೆಯಲ್ಲಿ 1335 ಸಕ್ರಿಯ ಪ್ರಕರಣಗಳಿವೆ. ಸರ್ಕಾರಿ ಆಸ್ಪತ್ರೆಯಲ್ಲಿ 44, ಕೋವಿಡ್ ಕೇರ್ ಸೆಂಟರ್‌ನಲ್ಲಿ 15, ಖಾಸಗಿ ಆಸ್ಪತ್ರೆಯಲ್ಲಿ 3, ಮನೆಯಲ್ಲಿ 1273 ಮಂದಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಕ್ರಾಂತಿಯ ಕಿಡಿ
ಕಾಯಕಯೋಗಿ
KAYAKAYOGI - Morning Daily ಕನ್ನಡ ದಿನಪತ್ರಿಕೆ
ಬುಧವಾರ
09 ಫೆಬ್ರವರಿ 2022

## ಅಪಘಾತ: ಬೈಕ್ ಸವಾರ ಸ್ಥಳದಲ್ಲೇ ಸಾವು

ಮೈಸೂರು : ಅಪರಿಚಿತ ವಾಹನ ಡಿಕ್ಕಿಯಾಗಿ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಮೈಸೂರು ಜಿಲ್ಲೆ ತಿ. ನರಸೀಪುರದಲ್ಲಿ ನಡೆದಿದೆ.

ತಿ.ನರಸೀಪುರ ಪಟ್ಟಣದ ಕಪಿಲಾ ನದಿ ಸೇತುವೆ ಮೇಲೆ ತಡರಾತ್ರಿ ಈ ಘಟನೆ ಜರುಗಿದ್ದು, ನರಸೀಪುರ ವಿನಾಯಕ ಕಾಲೋನಿ ನಿವಾಸಿ ಅಬ್ದುಲ್ ರಶೀದ್ (38) ಮೃತಪಟ್ಟ ದುರ್ದೈವಿ. ಶ್ರೀರಂಗಪಟ್ಟಣ ಸನ್ಫ್ಲ್ಯಯರ್ ಫ್ಯಾಕ್ಟರಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅಬ್ದುಲ್ ರಶೀದ್ ರಾತ್ರಿ ಕೆಲಸಕ್ಕೆ ತೆರಳುವ ವೇಳೆ ಅಪರಿಚಿತ ವಾಹನ ಬೈಕ್ ಡಿಕ್ಕಿಯಾಗಿ ಈ ಘಟನೆ ಸಂಭವಿಸಿದೆ. ಈ ಕುರಿತು ತಿ.ನರಸೀಪುರ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ತಾಲ್ಲೂಕಿನ ಮೆಲ್ಲಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 456 ವಿದ್ಯಾರ್ಥಿಗಳಿಗೆ ಇನ್ಫೋಸಿಸ್ ಸಂಸ್ಥೆಯ 'ಸಾಫೇನ್' ಉದ್ಯೋಗಿಗಳ ಬಳಗ ಉಚಿತ ನೋಟ್ ಬುಕ್‌ಗಳನ್ನು ವಿತರಿಸಿತು. ಈ ಸಂದರ್ಭದಲ್ಲಿ ಜಿಲ್ಲಾ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಟಿ. ಸತೀಶ್ ಜವರೇಗೌಡ, ಮುಖ್ಯ ಶಿಕ್ಷಕಿ ಎನ್. ಅನುಪಮ ಹಾಗೂ ಕಂಪನಿಯ ಉದ್ಯೋಗಿಗಳು ಉಪಸ್ಥಿತರಿದ್ದರು.



## ನಿರುದ್ಯೋಗಿ ಯುವಕ ಯುವತಿಯರಿಗೆ ಮೂರು ತಿಂಗಳ ಉಚಿತ ವೃತ್ತಿಪರ ತರಬೇತಿ

ಮಂಡ್ಯ : ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2021-22ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವಕ ಮತ್ತು ಯುವತಿಯರಿಗೆ ಮೈಸೂರಿನಲ್ಲಿರುವ ಭಾರತ ಸರ್ಕಾರದ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ತಂತ್ರಜ್ಞಾನ ಸಂಸ್ಥೆಯಲ್ಲಿ ಉಚಿತ ಊಟ ಮತ್ತು ವಸತಿಯೊಂದಿಗೆ ಪ್ಲಾಸ್ಟಿಕ್ ತಂತ್ರಜ್ಞಾನದ ಬಗ್ಗೆ 3 ತಿಂಗಳ ವಿವಿಧ ರೀತಿಯ ವೃತ್ತಿಪರ ತರಬೇತಿಗಳನ್ನು ಹಮ್ಮಿಕೊಳ್ಳಲಾಗಿದ್ದು, ತರಬೇತಿ ಅವಧಿಯಲ್ಲಿ ತಿಂಗಳಿಗೆ 2000 ಶಿಷ್ಯವೇತನ ನೀಡಲಾಗುವುದು.

ತರಬೇತಿ ಪಡೆಯಲು 8ನೇ ತರಗತಿ/ ಎಸ್.ಎಸ್.ಎಲ್.ಸಿ/ಪಿ.ಯು.ಸಿ. ಪದವಿ.ಐ.ಟಿ.ಐ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಅಗತ್ಯ ದಾಖಲಾತಿ ಗಳೊಂದಿಗೆ 6 ಪಾಸ್‌ಪೋರ್ಟ್ ಅಳತೆಯ ಫೋಟೋಗಳೊಂದಿಗೆ ಫೆಬ್ರವರಿ 14 ರೊಳಗಾಗಿ ನಂ.87/ ಎ, ಹೆಬ್ಬಾಳ್ ಇಂಡಸ್ಟ್ರಿಯಲ್ ಏರಿಯಾ, ಸೆಂಟ್ರಲ್ ಇನ್ಸಿಟ್ಯೂಟ್ ಆಫ್ ಪೆಟ್ರೋಕೆಮಿಕ್ಸ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ ಸಂಸ್ಥೆಯಲ್ಲಿ ಬೆ.10 ಸಂ.5 ಗಂಟೆಯವರೆಗೆ ಆಯ್ಕೆ ಸಂದರ್ಶನದಲ್ಲಿ ಭಾಗವಹಿಸಬಹುದು. ಮಾಹಿತಿಗಾಗಿ ಮೊ.ಸಂ:9380756034/ 9845873498 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಗಮಂಗಲ ಪುರಸಭೆಯ ಪೂರ್ವಭಾವಿ ಸಭೆ


ಮಂಡ್ಯ : ನಾಗಮಗಲ ಪುರಸಭೆಯ 2022-23ನೇ ಸಾಲಿನ ಆಯವ್ಯಯ ಮಂಡಿಸುವ ಸಲುವಾಗಿ ಪೂರ್ವಭಾವಿ ಸಭೆಯನ್ನು ಫೆಬ್ರವರಿ 9 ರಂದು ಬೆಳಿಗ್ಗೆ 11 ಗಂಟೆಗೆ ಅಂಬೇಡ್ಕರ್ ಭವನ ಸಭಾಂಗಣದಲ್ಲಿ ಪುರಸಭಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ. ಸದರಿ ಸಭೆಗೆ ಎಲ್ಲಾ ಪುರಸಭಾ ಚುನಾಯಿತ ಪ್ರತಿನಿಧಿಗಳು, ಮಾಜಿ ಪುರಸಭಾ ಅಧ್ಯಕ್ಷರು ಗಳು, ಉಪಾಧ್ಯಕ್ಷರುಗಳು, ಸ್ಥಾಯಿ ಸಮಿತಿ ಅಧ್ಯಕ್ಷರುಗಳು, ಸದಸ್ಯರುಗಳು, ಹಾಗೂ ಪುರಸಭಾ ವ್ಯಾಪ್ತಿಯ ಎಲ್ಲಾ ವಿವಿಧ ಸಂಘ-ಸಂಸ್ಥೆಗಳ ಅಧ್ಯಕ್ಷರುಗಳು, ಪದಾಧಿಕಾರಿಗಳು ಆಗಮಿಸಿ ಆಯ-ವ್ಯಯಕ್ಕೆ ಸಂಬಂಧಿಸಿದಂತೆ ತಮ್ಮ ಸಲಹೆ-ಸೂಚನೆಯನ್ನು ನೀಡಬೇಕಾಗಿ ನಾಗಮಗಲ ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

## ಹೊಸಹಳ್ಳಿ ಗ್ರಾಮದಿಂದ ವೃದ್ಧ ನಾಪತ್ತೆ

ಮದ್ದೂರು : ತಾಲ್ಲೂಕಿನ ಹೊಸಹಳ್ಳಿ ಗ್ರಾಮದ ಕೆಂಪೇಗೌಡ (78) ಎಂಬುವವರು ಜನವರಿ 22 ರಂದು ಮನೆಯಿಂದ ಹೊರಹೊದವರು ಕಾಣೆಯಾಗಿದ್ದಾರೆಂದು ಕೆಸ್ತೂರು ಪೊಲೀಸ್ ಠಾಣೆಯಿಂದ ದೂರು ದಾಖಲಾಗಿದೆ. ಕಾಣೆಯಾದ ವ್ಯಕ್ತಿಯು 5.5 ಅಡಿ ಎತ್ತರವಿದ್ದು, ಧೃಡಕಾಯ ಶರೀರ, ಎಣ್ಣೆ ಗೆಂಪು ಮೈಬಣ್ಣ ಹೊಂದಿರುತ್ತಾರೆ. ಕಾಣೆಯಾದ ದಿನದಂದು ಖಾಕಿ ಬಣ್ಣದ ನಿಕ್ಕರ್, ತಿಳಿ ನೀಲಿ ಬಣ್ಣದ ಅರ್ಧತೋಳಿನ ಶರ್ಟ್ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ಕೆಸ್ತೂರು ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು ಎಂದು ಕೆಸ್ತೂರು ಪೊಲೀಸ್ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

## ಜ್ಞಾನ ಹೆಚ್ಚಿಸುವ ದೇಗುಲ ಗ್ರಂಥಾಲಯ: ಸಚಿವ

ಕೆ.ಆರ್.ಪೇಟೆ : ತಾಲೂಕಿನ ಮಡುವಿನಕೋಡಿ ಮತ್ತು ಹರಿಹರಪುರ ಗ್ರಾಮ ಪಂಚಾಯಿತಿ ವತಿಯಿಂದ ನೂತನವಾಗಿ ಅಮೃತ ಯೋಜನೆ ಅಡಿಯಲ್ಲಿ ಆರಂಭಿಸಲಾಗಿರುವ ಡಿಜಿಟಲ್ ಗ್ರಂಥಾಲಯ ಹಾಗೂ ಘನತ್ಯಾಜ್ಯ ಘಟಕವನ್ನು ರೇಷ್ಮೆ ಹಾಗೂ ಯುವಜನ ಕ್ರೀಡಾ ಸಚಿವರಾದ ಕೆ.ಸಿ.ನಾರಾಯಣಗೌಡ ಅವರು ಉದ್ಘಾಟಿಸಿದರು.



ಬಳಿಕ ಮಾತನಾಡಿದ ಅವರು, ಗ್ರಂಥಾಲಯಗಳು ಜ್ಞಾನ ಹೆಚ್ಚಿಸುವ ದೇಗುಲಗಳಾಗಿವೆ. ಇದನ್ನು ಸದ್ಬಳಕೆ ಮಾಡಿಕೊಂಡು ವಿದ್ಯಾರ್ಥಿಗಳು ಹಾಗೂ ಯುವಕರು ಉನ್ನತ ಶಿಕ್ಷಣ ಪಡೆದುಕೊಳ್ಳಬೇಕು. ಗ್ರಂಥಾಲಯದಲ್ಲಿ ಸಿಗುವ ಉದ್ಯೋಗದ ಬಗೆಗಿನ ಮಾಹಿತಿ ಪಡೆದುಕೊಂಡು ತಮ್ಮ ಜ್ಞಾನಕ್ಕೆ ತಕ್ಕಂತಹ ಒಳ್ಳೆಯ ಉದ್ಯೋಗ ಪಡೆದುಕೊಳ್ಳಬೇಕು. ಗ್ರಂಥಾಲಯಗಳಿಗೆ ದಿನಪತ್ರಿಕೆಗಳು, ವಾರಪತ್ರಿಕೆಗಳು ಹಾಗೂ ಮಾಸ ಪತ್ರಿಕೆಗಳನ್ನು ಹಾಕಿಸಬೇಕು. ಜೊತೆಗೆ ಉದ್ಯೋಗ ಮಾಹಿತಿಯುಳ್ಳ ವೃತ್ತ ಪತ್ರಿಕೆಗಳನ್ನು ಸಹ ಗ್ರಂಥಾಲಯಕ್ಕೆ ಹಾಕಿಸಿ ಓದುಗರಿಗೆ ಅನುಕೂಲ ಮಾಡಿಕೊಡುವುದು ಗ್ರಂಥಾಲಯ ಮೇಲ್ವಿಚಾರಕರ ಮುಖ್ಯ ಕರ್ತವ್ಯವಾಗಿದೆ. ಗ್ರಂಥಾಲಯದ ಮುಂದೆ ಕೆಲಸದ ವೇಳೆ ಫಲಕ ಹಾಕಿ ನಿಗಧಿತ ಸಮಯದಲ್ಲಿ ಗ್ರಂಥಾಲಯ ಸದಾ ತೆರೆದಿರುವಂತೆ ನೋಡಿಕೊಳ್ಳಬೇಕು. ಗ್ರಂಥಾಲಯ ಮೇಲ್ವಿಚಾರಕರು ಸರಿಯಾಗಿ ಕರ್ತವ್ಯ ನಿರ್ವಹಣೆ ಮಾಡದೇ ಇದ್ದರೆ ಪಿಡಿಓ ಅವರು ಸೂಕ್ತ ಕ್ರಮ ಕೈಗೊಳ್ಳುವ ಅಧಿಕಾರವನ್ನು ನೀಡಲಾಗಿದೆ ಹಾಗಾಗಿ ಸಾರ್ವಜನಿಕರಿಂದ ಯಾವುದೇ ದೂರು ಬಾರದಂತೆ ನೋಡಿಕೊಳ್ಳಬೇಕು ಎಂದು ಗ್ರಂಥಾಲಯ ಮೇಲ್ವಿಚಾರಕರಿಗೆ ಸಲಹೆ ನೀಡಿದರು. ತಾಲೂಕಿನ ಎಲ್ಲಾ 34ಗ್ರಾಮ ಪಂಚಾಯಿತಿಗಳಲ್ಲಿಯೂ ಇದೇ ರೀತಿ ಡಿಜಿಟಲ್ ಗ್ರಂಥಾಲಯ ಆರಂಭಿಸಬೇಕು ಇದಕ್ಕೆ ಅಗತ್ಯ ಅನುಧಾನವನ್ನು ತಂದು ಕೊಡುವುದಾಗಿ ಸಚಿವರು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಎಂ.ವಿ.ರೂಪಾ, ಮೂಡಾ ಮಾಜಿ ಅಧ್ಯಕ್ಷ ಕೆ.ಶ್ರೀನಿವಾಸ್, ಜಿ.ಪಂ.ಮಾಜಿ ಉಪಾಧ್ಯಕ್ಷ ಎಸ್.ಅಂಬರೀಶ್, ತಾಲ್ಲೂಕು ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ ಕಟ್ಟೆಕ್ಯಾತನಹಳ್ಳಿ ಪಾಪಣ್ಣ, ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜು, ಮುಖಂಡರಾದ ಬಿ.ಸಿ.ಹರ್ಷ, ಡಿ.ಪಿ.ಪರಮೇಶ್, ಸಾರಂಗಿ ಮಂಜುನಾಥಗೌಡ, ಭಾರತೀಪುರ ಪುಟ್ಟಣ್ಣ, ಸಾರಂಗಿ ನಾಗಣ್ಣ, ವಕೀಲರ ಎಂ.ಸಿ.ಪ್ರವೀಣ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಎಸ್.ಚಂದ್ರಶೇಖರ್, ನರೇಗಾ ಸಹಾಯಕ ನಿರ್ದೇಶಕ ಸಂದೀಪ್, ಹರಿಹರಪುರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಆಶಾಪ್ರಸನ್ನ, ಪಿಡಿಓ ನಾಯಿದಾ ಅಕ್ತರ್, ಮಡುವಿನಕೋಡಿ ಗ್ರಾ.ಪಂ.ಅಧ್ಯಕ್ಷ ಎಂ.ಎಸ್.ಮಂಜುನಾಥ್, ಉಪಾಧ್ಯಕ್ಷೆ ಶಿಬಾಫಿರ್‌ದೋಸ್, ಪಿಡಿಓ ಟಿ.ಸಿ.ಅನು, ತಾಲ್ಲೂಕು ಬಿಜೆಪಿ ಪ್ರಧಾನ ಕಾರ್ಯದರ್ಶಿ ಚೋಕನಹಳ್ಳಿ ಪ್ರಕಾಶ್, ತಾಲ್ಲೂಕು ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಲತಾಮುರುಳಿ, ಬಿಜೆಪಿ ಎಸ್.ಟಿ.ಮೋರ್ಚಾ ಅಧ್ಯಕ್ಷ ಮಹೇಶ್‌ನಾಯಕ್, ಪುರಸಭಾ ಸದಸ್ಯ ಕೆ.ಎನ್.ಮಹೇಶ್, ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಮೈಸೂರು ತಾಲ್ಲೂಕು ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮೈಸೂರು : ಮೈಸೂರು ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2021-22 ನೇ ಸಾಲಿನಲ್ಲಿ ಅನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು 2022ರ ಜನವರಿ 27 ರವರೆಗೆ ವಿಸ್ತರಿಸಲಾಗಿದೆ.

ಹಿಂದುಳಿದ ವರ್ಗಗಳ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಆನ್‌ಲೈನ್ www.bcwd.karnataka.gov.in ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಪೋಷಕರ ಆದಾಯದ ಮಿತಿಯು ಪ್ರವರ್ಗ-1, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ದವರಿಗೆ 2.50 ಲಕ್ಷವಿರಬೇಕು, ಪ್ರವರ್ಗ-2ಎ, 2ಬಿ, 3ಎ, 3ಬಿ ಇತರೆ ಹಿಂದುಳಿದ ಹಾಗೂ ಇತರೆದವರಿಗೆ 1ಲಕ್ಷ ಇರಬೇಕು.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲಾತಿಗಳ ವಿವರ ಹಾಗೂ ಸರ್ಕಾರದ ಆದೇಶಕ್ಕಾಗಿ ಇಲಾಖೆ ವೆಬ್‌ಸೈಟ್: www.bcwd.karnataka.gov.in ರಲ್ಲಿ ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd.hostels @karnataka.gov.in ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ /ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲಾತಿಗಳೊಂದಿಗೆ ಸಂಪರ್ಕಿಸಬಹುದು. ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050370006 ಅನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ಧಮ್' ಇದ್ದರೆ ಮಸೀದಿಗೆ ಮುಸ್ಲಿಂ ಮಹಿಳೆಗೆ ಪ್ರವೇಶ ಕೊಡಿಸಿ

### ಕಾಂಗ್ರೆಸ್ ಶಾಸಕಿ ಖನೀಜಾ ಫಾತಿಮಾಗೆ ಸಚಿವ ಕೆ.ಎಸ್. ಈಶ್ವರಪ್ಪ ಸವಾಲು

ಮೈಸೂರು : ಹಿಜಾಬ್ ಧರಿಸಿ ಅಧಿವೇಶನಕ್ಕೆ ಬರುವೆ ಧೈರ್ಯವಿದ್ದರೆ ತಡೆಯಿರಿ ಎಂದು ಹೇಳಿಕೆ ನೀಡಿದ್ಧ ಕಲಬುರಗಿ ಕಾಂಗ್ರೆಸ್ ಶಾಸಕಿ ಖನೀಜಾ ಫಾತಿಮಾಗೆ ತಿರುಗೇಟು ನೀಡಿರುವ ಸಚಿವ ಕೆ.ಎಸ್ ಈಶ್ವರಪ್ಪ, ಧಮ್ ಇದ್ದರೆ ಮಸೀದಿಗೆ ಮುಸ್ಲಿಂ ಮಹಿಳೆಗೆ ಪ್ರವೇಶ ಕೊಡಿಸಿ ಎಂದು ಸವಾಲು ಹಾಕಿದ್ದಾರೆ.

ನಗರದಲ್ಲಿ ಹಿಜಾಬ್ ಕುರಿತು ಮಾಧ್ಯಮಗಳ ಜತೆ ಮಾತನಾಡಿದ ಸಚಿವರು, ಹಿಜಾಬ್ ಹಾಕಿಕೊಂಡು ಅಧಿವೇಶನಕ್ಕೆ ಬರುವುದಲ್ಲ. ನೀವು ಮೊದಲು ಮಸೀದಿಗೆ ಹೋಗಿ. ಎಷ್ಟು ಜನ ಮಹಿಳೆಯರು ಮಸೀದಿಗೆ ಹೋಗಲು ಅವಕಾಶ ಇದೆ.? ನಾವು ಶಾಲೆಗೆ ಮಾತ್ರ ಹಿಜಾಬ್ ನಿಷೇಧಿಸಿದ್ದೇವೆ. ಹೊರಗಡೆಗೆ ನಿಷೇಧ ಮಾಡಿಲ್ಲ, ಎಲ್ಲಾ ಕಡೆ ಹಾಕಿಕೊಂಡು ಹೋಗಬಹುದು ಎಂದು ಕಿಡಿಕಾರಿದರು.

ಇದೇ ವೇಳೆ ಮಾಜಿ ಸಿಎಂ ಸಿದ್ದರಾಮಯ್ಯ ವಿರುದ್ದವೂ ವಾಗ್ದಾಳಿ ನಡೆಸಿದ ಸಚಿವ ಕೆ.ಎಸ್ ಈಶ್ವರಪ್ಪ. ಸಿದ್ದರಾಮಯ್ಯ ತಾನು ಎರಡನೇ ಅಂಬೇಡ್ಕರ್ ಅಂತಾ ಹೇಳಿಕೊಳ್ಳುತ್ತಾರೆ. ಅವರಿಗೆ ಸಂವಿಧಾನ ಕಾನೂನು ಗೊತ್ತಿಲ್ಲವಾ.? ಸಿಎಂ ಆಗಿದ್ದವರಿಗೆ ನ್ಯಾಯಾಲಯದ ಆದೇಶ ಕಾನೂನು ಗೊತ್ತಿಲ್ಲವಾ.? ಕೇರಳದ ಹೈ ಕೋರ್ಟ್ ಏನು



ಹೇಳಿದೆ ಎಂಬುದನ್ನು ಸಿದ್ದರಾಮಯ್ಯ ಓದಿಕೊಳ್ಳಲಿ. ಸರ್ಕಾರದ ಆದೇಶ ಮಾಡಿದೆ ಈ ಬಗ್ಗೆ ಕಾಂಗ್ರೆಸ್ ನಿಲುವ ಸ್ಪಷ್ಟನೆ ಮಾಡಿ. ಕಾನೂನು ಪಾಲನೆ ಮಾಡಬೇಕೋ ಬೇಡವೋ ಸಿದ್ದರಾಮಯ್ಯ ಸ್ಪಷ್ಟಪಡಿಸಲಿ ಎಂದು ಗುಡಗಿದರು.

ಹಿಜಾಬ್ ವಿಚಾರದಲ್ಲಿ ಎಂ.ಎಲ್.ಸಿ ಸಿಎಂ ಇಬ್ರಾಹಿಂ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಸಚಿವ ಕೆ.ಎಸ್ ಈಶ್ವರಪ್ಪ, ಇದು ವಿಕೃತಿಯಿಂದ ಕೂಡಿದ ಹೇಳಿಕೆ. ಇದು ಮುಸ್ಲಿಂ ಮಹಿಳೆಯರಿಗೆ ಮಾಡಿದ ಅವಮಾನ. ಅವರ ಮುಖ ನೋಡಲು ಹಿಜಾಬ್ ತೆಗೆಯಬೇಕಾ.? ಇಬ್ರಾಹಿಂ ಅವರ ಈ ಹೇಳಿಕೆ ಯಾರು ಒಪ್ಪುವಂತದಲ್ಲ. ಸಮವಸ್ತ್ರದ ಹಿನ್ನೆಲೆಯಿಂದ ಈ ಆದೇಶ ಮಾಡಲಾಗಿದೆ ಎಂದರು.

**ಹಿಜಾಬ್ ವಿಚಾರದಿಂದಲೇ ಕಾಂಗ್ರೆಸ್ ಸರ್ವನಾಶ:** ಹಿಜಾಬ್ ವಿಚಾರದಿಂದಲೇ ಕಾಂಗ್ರೆಸ್ ಸರ್ವನಾಶವಾಗಲಿದೆ ಎಂದು ಸಚಿವ ಕೆ.ಎಸ್.ಈಶ್ವರಪ್ಪ ಭವಿಷ್ಯ ನುಡಿದಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಜಾಬ್ ವಿಚಾರದಿಂದಲೇ ಕಾಂಗ್ರೆಸ್ ಸರ್ವನಾಶವಾಗುವುದು ಖಚಿತ. ಉಡುಪಿಯಿಂದಲೇ ಕಾಂಗ್ರೆಸ್ ಸರ್ವನಾಶದ ಆರಂಭವಾಗಿದೆ ಎಂದಿದ್ದಾರೆ.

ಈ ಹಿಂದೆ ಗೋ ಹತ್ಯೆ ನಿಷೇಧವನ್ನು ಉಡುಪಿಯಲ್ಲೇ ಮಾಡಿದ್ದರು. ಆಗ ಸಿದ್ದರಾಮಯ್ಯ ಸಿಎಂ ಅಧಿಕಾರ ಕಳೆದುಕೊಂಡರು. ಇದೀಗ ಹಿಜಾಬ್ ವಿಚಾರದಿಂದಲೇ ಕಾಂಗ್ರೆಸ್ ಸರ್ವನಾಶವಾಗಲಿದೆ ಎಂದು ಟೀಕಿಸಿದ್ದಾರೆ.

ಹಿಜಾಬ್ ಧರಿಸಿ ಅಧಿವೇಶನಕ್ಕೆ ಬರುವುದಲ್ಲ, ಮೊದಲು ಧಮ್ ಇದ್ದರೆ ಮುಸ್ಲೀಂ ಮಹಿಳೆಯರಿಗೆ ಮಸೀದಿಗೆ ಪ್ರವೇಶ ಕೊಡಿಸಿ ಎಂದು ಕೆ.ಎಸ್.ಈಶ್ವರಪ್ಪ ಸವಾಲು ಹಾಕಿದ್ದಾರೆ.

ಇದಕ್ಕೂ ಮುನ್ನ ಮೈಸೂರು ನಗರಕ್ಕೆ ಆಗಮಿಸಿದ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆಯ ಸಚಿವರಾದ ಕೆ.ಎಸ್. ಈಶ್ವರಪ್ಪ ಜೀ ಹಾಗೂ ಪತ್ನಿ ಜಯಲಕ್ಷ್ಮಿ, ಮೊಮ್ಮಗ ಅರ್ಥವ ಹಾಗೂ ಕುಟುಂಬ ಸಮೇತರಾಗಿ ತಾಯಿ ಚಾಮುಂಡೇಶ್ವರಿಯ ಆಶಿರ್ವಾದ ಪಡೆದರು. ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಮೋರ್ಚಾ ನಗರ ಅಧ್ಯಕ್ಷರಾದ ಜೋಗಿ ಮಂಜು ಸೇರಿದಂತೆ ಇತರರಿದ್ದರು.

## ಆರೋಗ್ಯ ಕೇಂದ್ರಗಳಿಗೆ ಡಿಹೆಚ್‌ಓ ವಿಶ್ವೇಶ್ವರಯ್ಯ ಭೇಟಿ, ಪರಿಶೀಲನೆ



ಚಾಮರಾಜನಗರ : ಜಿಲ್ಲೆಯಲ್ಲಿ ಕೋವಿಡ್ ಲಸಿಕೆ ನೀಡುವ ಕಾರ್ಯ ಪ್ರಗತಿಯಲ್ಲಿದ್ದುಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಎಂ.ವಿಶ್ವೇಶ್ವರಯ್ಯ ಅವರು ಚಾಮರಾಜ ನಗರ ಹಾಗೂ ಗುಂಡ್ಲುಪೇಟೆ ತಾಲೂಕಿನ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಲಸಿಕೆ ಕಾರ್ಯವನ್ನು ಪರಿಶೀಲಿಸಿದರು.

ಚಾಮರಾಜನಗರ ತಾಲೂಕಿನ ಹರವೆ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಗುಂಡ್ಲುಪೇಟೆ ತಾಲೂಕಿನ ಕಬ್ಬಳ್ಳಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿ ನಡೆಯುತ್ತಿರುವ ಲಸಿಕಾಕರಣವನ್ನು ವೀಕ್ಷಿಸಿದರು. ಇದುವರೆಗೆ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಲಸಿಕೆ ನೀಡುವಲ್ಲಿ ಆಗಿರುವ ಪ್ರಗತಿ ಪರಿಶೀಲಿಸಿದರು. ಎರಡನೇ ಡೋಸ್ ಲಸಿಕಾಕರಣದಲ್ಲಿ ಪೂರ್ಣ ಪ್ರಮಾಣದಲ್ಲಿ ಅರ್ಹರೆಲ್ಲರೂ ಲಸಿಕೆ ಪಡೆಯಬೇಕು. ಈ ನಿಟ್ಟಿನಲ್ಲಿ ವಿಶೇಷ ಗಮನಹರಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ವಿಶ್ವೇಶ್ವರಯ್ಯ ಸ್ಥಳೀಯ ಆಡಳಿತ ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಅರ್ಹ ಹಿರಿಯ ನಾಗರಿಕರಿಗೆ ಹಾಗೂ ಮುಂಚೂಣಿ ಕಾರ್ಯಕರ್ತರಿಗೆ ಮುನ್ನೆಚ್ಚರಿಕೆ ಡೋಸ್ ನೀಡುವ ಕಾರ್ಯವನ್ನು ತ್ವರಿತಗೊಳಿಸಬೇಕು. 15 ರಿಂದ 18ರ ವಯಸ್ಸಿನ ಮಕ್ಕಳ ಲಸಿಕಾಕರಣವು ಸಹ ನಡೆಯಬೇಕು. ಈ ನಿಟ್ಟಿನಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು ಲಸಿಕೆ ಪಡೆಯಲು ಅಗತ್ಯಕ್ರಮಕ್ಕೆ ಸೂಚಿಸಬೇಕು. ಒಟ್ಟಾರೆ ಅರ್ಹರೆಲ್ಲರೂ ಪೂರ್ಣ ಪ್ರಮಾಣದಲ್ಲಿ ಲಸಿಕೆ ಪಡೆಯುವ ಮೂಲಕ ಶೇ. 100ರಷ್ಟು ಪ್ರಗತಿಗೆ ಪೂರಕ ಕ್ರಮವಹಿಸಬೇಕೆಂದು ಅವರು ತಿಳಿಸಿದರು.

## ಕೆ.ಆರ್.ಪೇಟೆ: ಗ್ರಾಮಸಭೆಯಲ್ಲಿ ಆಶ್ರಯ ಮನೆ ಫಲಾನುಭವಿಗಳ ಆಯ್ಕೆ



ಕೃಷ್ಣರಾಜಪೇಟೆ : ತಾಲೂಕಿನ ಅಕ್ಕಿ ಹೆಬ್ಬಾಳು ಹೋಬಳಿಯ ಸೋಮನಹಳ್ಳಿ ಗ್ರಾಮ ಪಂಚಾಯಿತಿ ಆವರಣದಲ್ಲಿ ವಿವಿಧ ಆಶ್ರಯ ಮನೆ ಅನುಭವಿಗಳ ಆಯ್ಕೆ ಹಾಗೂ ನರೇಗಾ ಯೋಜನೆ ಲೆಕ್ಕಪರಿಶೋಧನ ವಿಶೇಷ ಗ್ರಾಮ ಸಭೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಂಜನಿ ಗೌಡ (ಪಾಪಣ್ಣ) ಅಧ್ಯಕ್ಷತೆಯಲ್ಲಿ ನಡೆಯಿತು.

ನೋಡಲ್ ಅಧಿಕಾರಿ ಸಹಾಯಕ ಕೃಷಿ ಅಧಿಕಾರಿಗಳು ಕೃಷಿ ಇಲಾಖೆ ಆನಂದ್ ಹಾಗೂ ಪಂಚಾಯತಿ ಅಧ್ಯಕ್ಷ ಅಂಜನಿ ಗೌಡ ಗಿಡಕ್ಕೆ ನೀರು ಹಾಕುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ನಂತರ ಮಾತನಾಡಿದ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಂಜನಿಗೌಡ (ಪಾಪಣ್ಣ) ನಮ್ಮ ಗ್ರಾಮ ಪಂಚಾಯಿತಿಗೆ ನಾಲ್ವತ್ತು ಮನೆಗಳ ಮಂಜೂರಾತಿ ಯಾಗಿದ್ದು ಮನೆಗಳನ್ನು ಗ್ರಾಮಸಭೆಯಲ್ಲಿ ಲಾಟರಿ ಮೂಲಕ ಫಲಾನುಭವಿಗಳ ಆಯ್ಕೆ ಮಾಡಿದ್ದೇವೆ. ನರೇಗಾ ಯೋಜ ನೆಯು ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ವರದಾನವಾದ ಯೋಜನೆಯಾಗಿದೆ. ಇದನ್ನು ಸದ್ಬಳಕೆ ಮಾಡಿಕೊಂಡು ಪ್ರತಿ ಗ್ರಾಮವನ್ನು ಅಭಿವೃದ್ಧಿಗೆ ನಮ್ಮ ಗ್ರಾಮ ಪಂಚಾಯಿತಿ ಸದಸ್ಯರು ಶ್ರಮಿಸಬೇಕು ಎಂದರು. ರೈತರಿಗಾಗಿ ನರೇಗಾ ಯೋ ಜನೆ ಅಡಿಯಲ್ಲಿ ಜಮೀನುಗಳು ಅಭಿವೃದ್ಧಿ, ತೆಂಗು ಅಭಿವೃದ್ಧಿ, ಬಾಳೆ ಅಭಿ ವೃದ್ಧಿ, ಕೃಷಿ ಹೊಂಡ ನಿರ್ಮಾಣ, ಅರಣ್ಯ ಕೃಷಿ, ಜಾನುವಾರುಗಳ ಕೊಟ್ಟಿಗೆ ಹಾಗೂ ಕುಡಿಯುವ ನೀರಿನ ತೊಟ್ಟಿ ನಿರ್ಮಾಣ, ಕೆರೆ-ಕಟ್ಟೆಗಳ ಅಭಿವೃದ್ಧಿ, ಗ್ರಾಮದ ಚರಂಡಿ ಹಾಗೂ ರಸ್ತೆಗಳ ಅಭಿವೃದ್ಧಿ ಸೇರಿದಂತೆ ಹಲವು ಕಾಮಗಾರಿಗಳನ್ನು ಕೈಗೊಳ್ಳ ಬಹುದಾಗಿದೆ. ಇದಕ್ಕೆ ಪ್ರಮುಖವಾಗಿ ಮಾನವ ಸಂಪನ್ಮೂಲ ಬಳಕೆ ಅತಿ ಮುಖ್ಯವಾಗಿದೆ. ಜಾಬ್ ಕಾರ್ಡ್ ಗಳ ಮೂಲಕ ಮಾತ್ರ ನರೇಗಾ ಅನುಷ್ಠಾನಕ್ಕೆ ಅವಕಾಶವಿದೆ. ಹಾಗಾಗಿ ಸರ್ಕಾರಿ ನೌಕರರನ್ನು ಹೊರತುಪಡಿಸಿ 18 ವರ್ಷ ತುಂಬಿದ ಪ್ರತಿಯೊಬ್ಬರು ಜಾಬ್ ಕಾರ್ಡ್‌ಗಳ ಮಾಡಿಸಿಕೊಂಡು ಉದ್ಯೋಗ ಖಾತ್ರಿ ಯೋಜನೆ ಬಳಸಿಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ನರೇಗಾ ಯೋಜನೆಯ ಇಂಜಿನಿಯರ್ ವರುಣ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಿ.ಎಸ್.ಶಿವಸ್ವಾಮಿ, ಉಪಾಧ್ಯಕ್ಷ ಚಂದ್ರಯ್ಯ, ಕಾರ್ಯದರ್ಶಿ ಪೂರ್ಣಿಮಾ, ಹಾಗೂ ಗ್ರಾಮ ಪಂಚಾಯಿತಿಯ ಸರ್ವ ಸದಸ್ಯರು ಮತ್ತು ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸಂಗೀತ ಲೋಕದಲ್ಲಿ ಭೀಮಸೇನ ಜೋಶಿ ಅಜರಾಮರ: ಮಡ್ಡಿಕೆರೆ ಗೋಪಾಲ್

ಮೈಸೂರು : ಸಂಗೀತ ಲೋಕದ ಧ್ರುವ ತಾರೆ ಭೀಮಸೇನ ಜೋಶಿ ಸಂಗೀತ ಪ್ರೇಮಿಗಳ ಹೃದಯಗಳಲ್ಲಿ ನೆಲೆಸಿ ಅಜರಾಮರರಾಗಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ತಿಳಿಸಿದ್ದಾರೆ.



ಪ್ರಸಾದ್ ಸ್ಕೂಲ್ ಆಫ್ ರಿದಮ್ಸ್ ತಾಳ ವಾದ್ಯ ಪ್ರತಿಷ್ಠಾನ ವತಿಯಿಂದ ರಾಮಾನುಜ ರಸ್ತೆಯಲ್ಲಿರುವ ತಾಳವಾದ್ಯ ಪ್ರತಿಷ್ಠಾನ ಸಂಗೀತ ಕಚೇರಿಯಲ್ಲಿ ಭಾರತರತ್ನ ಪಂಡಿತ್ ಭೀಮಸೇನ ಜೋಶಿ ಅವರ ಜನ್ಮಶತಾಬ್ದಿ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಆನಂತರ ಹಿರಿಯ ಹಿಂದೂಸ್ತಾನಿ ಕಲಾವಿದರದ ಪಂಡಿತ್ ರಮೇಶ್ ಧನ್ನೂರ, ಪಂಡಿತ್ ಭೀಮಾಶಂಕರ ಬಿದನೂರು, ಪಂಡಿತ್ ಡಾ.ಕಲ್ಮೇಶ ಬಡಿಗೇರ್,

ಡಾ.ಚೇತನಾ ಪತ್ತಾರ್, ವಿದುಷಿ ಡಾ.ವೀಣಾ ಪಂಡಿತ್, ಡಾ.ಶಿವಕುಮಾರ್, ಸನ್ಮಾನಿಸಿ ಮಾತನಾಡಿದ ಅವರು ಸಂಗೀತ ಕಲೆಯ ಮೂಲಕ ತಮ್ಮ ಜೀವನವನ್ನೆ ಅರ್ಪಣೆ ಮಾಡಿಕೊಳ್ಳುವುದು ಅಸಾಮಾನ್ಯ ವ್ಯಕ್ತಿಗಳು ಮಾತ್ರ ಅಂಥ ಸಾಲಿನಲ್ಲಿ ಹಿಂದೂಸ್ಥಾನಿ ಸಂಗೀತ ಕ್ಷೇತ್ರದ ಮೇರುಕಲಾವಿದರಾಗಿ ಭಾರತರತ್ನ ಪಡೆದವರು ಪಂಡಿತ್ ಭೀಮಸೇನ್ ಜೋಷಿ ರವರು ಎನ್ನುವುದು ನಮ್ಮ ಭಾರತದ ಸಂಗೀತ ಕ್ಷೇತ್ರ ಹಿರಿಮೆ ಹೆಚ್ಚಿಸಿದೆ, ಸಂಗೀತ ಕ್ಷೇತ್ರಕ್ಕೆ ಯಾವುದೇ ಜಾತಿ ಗಡಿ ವಯೋಮಿತಿ ಚೌಕಟ್ಟಿಲ್ಲ ಎಲ್ಲವನ್ನು ದಾಟಿದೆ ಭಾರತದ ಯೋಗ ಮತ್ತು ಸಂಗೀತ ವಿಶ್ವದಲ್ಲಡೆ ಮಹತ್ವರ ಸ್ಥಾನ ಪಡೆದಿದೆ, ಸಂಗೀತ ಕಲಿತರೆ ನಮ್ಮ ಸಂಪ್ರಾದ ಸಂಸ್ಕೃತಿ ಉಳಿಯುತ್ತದೆ ಸಣ್ಣ ಮಕ್ಕಳಲ್ಲಿ ಸಂಸ್ಕಾರ ಬೆಳೆಯುತ್ತದೆ, ಒಮ್ಮೆ ಡಾ. ರಾಜಕುಮಾರ್ ರವರು ಭೀಮಸೇನ್ ಜೋಷಿ ರವರನ್ನ ಭೇಟಿ ಮಾಡಿ ಭಾಗ್ಯದ ಲಕ್ಷ್ಮಿ ಬಾರಮ್ಮ ಹಾಡನ್ನ ಹಾಡಿಸಿ ತಲ್ಲೀನರಾಗುತ್ತಾರೆ ಮತ್ತು ಡಾ. ರಾಜಕುಮಾರ್ ರವರು ನಟರಾಗಿದ್ದವರು ಹಾಡಗಾರರಾಗಿ ಗುರುತಿಸಿ [redacted]

ಸಂಗೀತ ಕಲಿಯುವ ಸಣ್ಣ ಮಕ್ಕಳಿಗೆ ಭೀಮಸೇನ್ ಜೋಷಿರವರ ಜೀವನ ಆದರ್ಶವಾಗಿದೆ, ದೂರದರ್ಶನ ಮತ್ತು ಆಕಾಶವಾಣಿಯಲ್ಲಿ ಭೀಮಸೇನ್ ರವರ ಹಿಂದೂಸ್ತಾನಿ ಗಾಯಕರು ಭೀಮಸೇನ್ ಜೋಷಿ ರವರ ಜನ್ಮಶತಾಬ್ದಿ ಕಾರ್ಯಕ್ರಮ ರಾಜ್ಯ ಸರ್ಕಾರ ಸಂಸ್ಕೃತಿ ಇಲಾಖೆ ಒಂದು ತಿಂಗಳ ಹಿಂದೆಯೆ ಕಲಾವಿದರ ಸಮಿತಿ ರಚಿಸಿ ಜಿಲ್ಲಾಮಟ್ಟದಲ್ಲಿ ಸಂಗೀತ ಕಾರ್ಯಕ್ರಮಗಳನ್ನ ಒಗ್ಗೂಡಿಸಿ ಆಯೋಜಿಸಬೇಕಿತ್ತು ಮರೆತಿರುವುದು ಬೇಸರದ ಸಂಗತಿ, ಆದರೆ ರಥಸಪ್ತಮಿಯಂದಾದರೂ ಸಂಗೀತ ಆಯೋಜಿಸಿ ನೆನೆಯುವಲ್ಲಿ ಮುಂದಾಗಲಿ ಎಂದು ಮಾತನಾಡಿದರು

ಒಕ್ಕಲಿಗರ ಸಂಘದ ರಾಜ್ಯ ನಿರ್ದೇಶಕ ಸಿ.ಜಿ ಗಂಗಾಧರ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಪ್ರಸಾದ್ ಸ್ಕೂಲ್ ಆಫ್ ರಿದಮ್ಸ್ ತಾಲವಾದ್ಯ ಪ್ರತಿಷ್ಠಾನದ ಅಧ್ಯಕ್ಷರಾದ ಡಾ.ಸಿ.ಆರ್.ರಾಘವೇಂದ್ರ ಪ್ರಸಾದ್, ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಪ್ರಧಾನ ಕಾರ್ಯದರ್ಶಿ ವಿಕ್ರಂ ಅಯ್ಯಂಗಾರ್, ಸಂಘಟನಾ ಕಾರ್ಯದರ್ಶಿ ಅಜಯ್ ಶಾಸ್ತ್ರಿ, ವಿನಯ್ ಕಣಗಾಲ್, ಸುಚೇಂದ್ರ, ಚಕ್ರಪಾಣಿ, ತಬಲ ಜಗದೀಶ್, ಚೇತನ್ ಇನ್ನಿತರರಿದ್ದರು.

ಕ್ರಾಂತಿಯ ಕಿಡಿ
ಕಾಯಕಯೋಗಿ
KAYAKAYOGI - Morning Daily ಕನ್ನಡ ದಿನಪತ್ರಿಕೆ

# ಶೈಕ್ಷಣಿಕ ಕೇಂದ್ರಗಳಲ್ಲಿ ಅಶಾಂತಿಗೆ ಕಾರಣವಾಗುವವರ ವಿರುದ್ಧ ಕಠಿಣ ಕ್ರಮ: ಗೃಹ ಸಚಿವ ಅರಗ ಎಚ್ಚರಿಕೆ



ಬೆಂಗಳೂರು : ರಾಜ್ಯದಲ್ಲಿ ಕೇಸರಿ ಶಾಲು ಹಿಜಾಬ್ ವಿವಾದದ ಕಿಚ್ಚು ಹೆಚ್ಚಾಗಿದ್ದು ಹಲವು ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಪ್ರತಿಭಟನೆಗಿಳಿದಿದ್ದಾರೆ. ಈ ಮಧ್ಯೆ ಬಾಗಲಕೋಟೆ, ಶಿವಮೊಗ್ಗದ ಕಾಲೇಜಿನಲ್ಲಿ ಕಲ್ಲು ತೂರಾಟ ನಡೆದು ಪರಿಸ್ಥಿತಿ ಉದ್ವಿಗ್ನವಾಗಿದೆ.

ಈ ಹಿನ್ನೆಲೆಯಲ್ಲಿ ಈ ಕುರಿತು ಪ್ರತಿಕ್ರಿಯಿಸಿರುವ ಗೃಹ ಸಚಿವ ಅರಗ ಜ್ಞಾನೇಂದ್ರ, ಶೈಕ್ಷಣಿಕ ಕೇಂದ್ರಗಳಲ್ಲಿ ಅಶಾಂತಿಗೆ ಕಾರಣವಾಗುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾ ಗುವುದು ಎಂದು ಎಚ್ಚರಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ಮಾಡಿರುವ ಗೃಹ ಸಚಿವ ಅರಗ ಜ್ಞಾನೇಂದ್ರ, ಶೈಕ್ಷಣಿಕ ಕೇಂದ್ರಗಳಲ್ಲಿ ಅಶಾಂತಿಗೆ ಕಾರಣವಾಗುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗು ವುದು. ಶಾಲಾ-ಕಾಲೇಜುಗಳು ರಾಷ್ಟ್ರದ ಭಾವೈಕತೆಯ ಕೇಂದ್ರ ಬಿಂದು. ವಿದ್ಯಾರ್ಥಿಗಳ ಸಾಮಾಜಿಕ ಸ್ವಾಸ್ಥ ಕೆಡಿಸುವ ಅಸ್ತ್ರಗಳಾಗಬಾರದು. ಪೋಷಕರು ಇದರ ಬಗ್ಗೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದ್ದಾರೆ.

## ನಂದಿಬೆಟ್ಟದಲ್ಲಿ ಶೀಘ್ರವೇ ರೋಪ್ ವೇ: ಸಚಿವ ಆನಂದ್ ಸಿಂಗ್

ಚಿಕ್ಕಬಳ್ಳಾಪುರ: ನಂದಿಬೆಟ್ಟದಲ್ಲಿ ತಾಂತ್ರಿಕ ಕಾರಣಗಳಿಂದಾಗಿ ರೋಪ್ ವೇ ಯೋಜನೆ ನೆನೆಗುದಿಗೆ ಬಿದ್ದಿದ್ದು, ಶೀಘ್ರವೇ ಯೋಜನೆಯನ್ನು ಕಾರ್ಯಗತಗೊಳಿಸಲಾಗುವುದು ಎಂದು ಪ್ರವಾಸೋದ್ಯಮ, ಪರಿಸರ ಮತ್ತು ಜೀವಿಶಾಸ್ತ್ರ ಖಾತೆ ಸಚಿವರಾದ ಆನಂದ್ ಸಿಂಗ್ ಹೇಳಿದರು.

ನಂದಿಬೆಟ್ಟಕ್ಕೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಮಾಧ್ಯಮಗಳ ಜತೆ ಮಾತನಾಡಿದ ಸಚಿವ ಆನಂದ್ ಸಿಂಗ್, ರೋಪ್ ವೇ ಯೋಜನೆಗೆ ಸಂಬಂಧಿಸಿದಂತೆ ತಿಂಗಳಾಂತ್ಯಕ್ಕೆ ಟೆಂಡರ್ ಆಹ್ವಾನಿಸಲಾಗುವುದು. ಪರಿಸರಕ್ಕೆ ಯಾವುದೇ ಧಕ್ಕೆಯಾಗದಂತೆ ಯೋಜನೆಯನ್ನು ಜಾರಿಗೊಳಿಸಲಾಗುವುದು ಎಂದು ತಿಳಿಸಿದರು.

ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿರುವ ನಂದಿ ಬೆಟ್ಟದ ಪ್ರಕೃತಿ ಸೌಂದರ್ಯ ಸವಿಯಲು ಸಾವಿರಾರು ಮಂದಿ ಪ್ರವಾಸಿಗರು ಪ್ರತಿ ನಿತ್ಯ ಭೇಟಿ ಕೊಡುತ್ತಾರೆ. ಇಲ್ಲಿ ಯಾವುದೇ ಮೂಲಸೌಕರ್ಯಕ್ಕೆ ಕೊರತೆಯಾಗದಂತೆ ಕ್ರಮವಹಿಸಲಾಗುತ್ತದೆ. ಶೌಚಾಲಯ ಮತ್ತು ಕುಡಿಯುವ ನೀರಿನ ಸಮಸ್ಯೆ ಇರುವುದು ಗಮನಕ್ಕೆ ಬಂದಿದ್ದು, ಶೀಘ್ರವೇ ಸಮಸ್ಯೆಯನ್ನು ಬಗೆಹರಿಸಲಾಗುವುದು.

ಇಲ್ಲಿಗೆ ಬರುವ ಪ್ರವಾಸಿಗರಿಗೆ ಪ್ರಕೃತಿ ಸೌಂದರ್ಯ ಸವಿಯುವ ಜತೆಗೆ ಇಲ್ಲಿನ ಕಲೆ ಬಗ್ಗೆ ತಿಳಿಸುವ ನಿಟ್ಟಿನಲ್ಲಿ 'ಕಲಾಧಾಮ' ಎಂಬ ಚಟುವಟಿಕೆ ಆರಂಭಿಸುವ ಬಗ್ಗೆ ಚಿಂತಿಸಲಾಗಿದೆ. ಇದರಿಂದಾಗಿ ಸ್ಥಳೀಯ ಕಲಾವಿದರಿಗೆ ಪ್ರೋತ್ಸಾಹ ಹಾಗೂ ಉದ್ಯೋಗ ದೊರಕಿಸಿಕೊಟ್ಟಂತಾಗುತ್ತದೆ. ಅಲ್ಲದೆ, ವೃದ್ಧರು ಹಾಗೂ ವಿಕಲಚೇತನರಿಗೆ ಬೆಟ್ಟದ ಸೌಂದರ್ಯ ಸವಿಯಲು ಬ್ಯಾಟರಿ ಚಾಲಿತ ವಾಹನದ ವ್ಯವಸ್ಥೆ ಕಲ್ಪಿಸುವ ಬಗ್ಗೆ ಕ್ರಮಕೈಗೊಳ್ಳಲಾಗುವುದು ಎಂದರು.

ಮನಸೋ ಇಚ್ಛೆ ಪ್ರವೇಶ ಹಾಗೂ ಪಾರ್ಕಿಂಗ್ ಶುಲ್ಕ ಪಡೆಯಲಾಗುತ್ತದೆ ಎಂದು ಸಾರ್ವಜನಿಕರು ಸಚಿವರ ಗಮನಕ್ಕೆ ತಂದರು. ಈ ಬಗ್ಗೆ ಅಧಿಕಾರಿಗಳ ಜತೆ ಚರ್ಚಿಸಿ ಶುಲ್ಕ ಕಡಿಮೆ ಮಾಡುವ ಬಗ್ಗೆ ಕ್ರಮಕೈಗೊಳ್ಳಲಾಗುವುದು ಎಂದು ಸಚಿವ ಆನಂದ್ ಸಿಂಗ್ ಇದೇ ವೇಳೆ ಭರವಸೆ ನೀಡಿದರು.

ಮೂಲಸೌಕರ್ಯದಲ್ಲಿ ಪ್ರವಾಸಿಗರಿಗೆ ಯಾವುದೇ ತೊಂದರೆಯಾಗದಂತೆ ವ್ಯವಸ್ಥೆ ಕಲ್ಪಿಸಬೇಕು ಎಂದು ಸಚಿವ ಆನಂದ್ ಸಿಂಗ್ ಅಧಿಕಾರಿಗಳಿಗೆ ಸೂಚಿಸಿದರು.

ಪಾರ್ಕಿಂಗ್, ಉದ್ಯಾನ, ಮಕ್ಕಳ ಪಾರ್ಕ್ ನಿರ್ಮಾಣಕ್ಕೆ ಗುರುತಿಸಿರುವ ಸ್ಥಳಕ್ಕೆ ಸಚಿವ ಆನಂದ್ ಸಿಂಗ್ ಭೇಟಿ ನೀಡಿ ಪರಿಶೀಲನೆ ನಡೆಸಿ, ಯೋಜನೆ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ನಂದಿಬೆಟ್ಟವನ್ನು ಅಂತಾರಾಷ್ಟ್ರೀಯ ಪ್ರವಾಸಿ ತಾಣವಾಗಿ ರೂಪುಗೊಳಿಸಬೇಕಿದೆ. ಈ ತಾಣವು ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಸುಮಾರು 30 ಕಿ.ಮೀ. ದೂರದಲ್ಲಿದೆ. ಬೆಂಗಳೂರು ನಗರದಿಂದ ಒಂದು ಗಂಟೆಯಲ್ಲಿ ಬರಬಹುದು. ಈ ಪ್ರದೇಶವನ್ನು ಅಭಿವೃದ್ಧಿಪಡಿಸಿ ಪ್ರವಾಸಿಗರನ್ನು ಆಕರ್ಷಿಸುವ ನಿಟ್ಟಿನಲ್ಲಿ ಇನ್ನಷ್ಟು ಕ್ರಮ ವಹಿಸಲಾಗುವುದು ಎಂದರು.

**ಜೋಗದಲ್ಲಿ ರೋಪ್ ವೇ! :** ಇನ್ನು ಜೋಗ ಜಲಪಾತದಲ್ಲಿ 185 ಕೋಟಿ ವೆಚ್ಚದಲ್ಲಿ ರೋಪ್ ವೇ ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳಿಗೆ ಅನುಮೋದನೆ ದೊರೆತಿದ್ದು, ಕಾಮಗಾರಿಗಳು ಪ್ರಾರಂಭಗೊಳ್ಳಲಿವೆ. ಅದರಂತೆ ಹಂಪಿ, ಹಳೇಬೀಡು, ಬೇಲೂರು, ಬಾದಾಮಿಯಲ್ಲಿ ಪ್ರವಾಸೋದ್ಯಮದ ಇಲಾಖೆಯಿಂದ ಹಲವು ಅಭಿವೃದ್ಧಿ ಕಾಮಗಾರಿಗಳು ಪ್ರಾರಂಭಗೊಂಡಿವೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ, ನಿರ್ದೇಶಕರಾದ ಸಿಂಧೂ.ಬಿ ರೂಪೇಶ್, ಕೆಎಸ್ ಟಿಡಿಸಿ ವ್ಯವಸ್ಥಾಪಕ ನಿರ್ದೇಶಕ ಜಗದೀಶ್ ಹಾಗೂ ಅರಣ್ಯ ವಸತಿ ಹಾಗೂ ವಿಹಾರ ಧಾಮ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಮನೋಜ್ ಕುಮಾರ್, ಸಚಿವರ ವಿಶೇಷ ಕರ್ತವ್ಯಾಧಿಕಾರಿ ಟಿ.ಮುನಿರಾಜು ಹಾಗೂ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ನಕ್ಸಲ್ ನಿಗ್ರಹ ದಳ ಸಿಬ್ಬಂದಿಗಳಿಗೆ ವಿಶೇಷ ಆಹಾರ ಭತ್ಯೆ ಹೆಚ್ಚಿಸಿ ಸರ್ಕಾರ ಆದೇಶ

ಬೆಂಗಳೂರು : ನಕ್ಸಲ್ ನಿಗ್ರಹ ದಳ (ಎ ಎನ್ ಎಫ್) ಯೋಧರು ಹಾಗೂ ಆಂತರಿಕ ಭದ್ರತಾ ವಿಭಾಗದಲ್ಲಿ ಪ್ರಶಿಕ್ಷಣಾರ್ಥಿಗಳಾಗಿ, ಕಾರ್ಯ ನಿರ್ವಹಿಸುತ್ತಿರುವ ಪೊಲೀಸ್ ಸಿಬ್ಬಂದಿಗಳಿಗೆ, ನೀಡಲಾಗುತ್ತಿರುವ ವಿಶೇಷ ಆಹಾರ ಭತ್ಯೆ ದರವನ್ನು, ರೂಪಾಯಿ 130 ರಿಂದ 300 ರೂ.ಗಳಿಗೆ ಹೆಚ್ಚಿಸಿ ಸರಕಾರ ಆದೇಶ ಹೊರಡಿಸಿದೆ.

ಈ ಸಂಬಂಧ, ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಆಂತರಿಕ ಭದ್ರತಾ ವಿಭಾಗ, ಸರಕಾರಕ್ಕೆ ಸಲ್ಲಿಸಿದ್ದ ಕೋರಿಕೆಯನ್ನು ಪುರಸ್ಕರಿಸಿ, ಸರಕಾರವು, ವಿಶೇಷ ಆಹಾರ ಭತ್ಯೆಯನ್ನು ಪರಿಷ್ಕರಿಸಿದೆ.

ವಿಶೇಷ ಆಹಾರ ಹೆಚ್ಚುವರಿ ಭತ್ಯೆ, ಎ ಎನ್ ಎಫ್ ಪೊಲೀಸ್ ಸಿಬ್ಬಂದಿಗಳಿಗೆ ಹಾಗೂ ಆಂತರಿಕ ಭದ್ರತಾ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ, ಸಿಸಿಟಿ ಮತ್ತು ಗರುಡ ಪಡೆಯ ಯೋಧರಿಗೂ ಅನ್ವಯವಾಗುವಂತೆ ಆದೇಶ ಹೊರಡಿಸಲಾಗಿದೆ.

ಸರಕಾರ ಹೊರಡಿಸಿರುವ ಭತ್ಯೆ ಹೆಚ್ಚಳ ಆದೇಶ, ನಿಮ್ಹಾನ್ಸ್ ಆಸ್ಪತ್ರೆ ಆಹಾರ ತಜ್ಞರು ನಿಗದಿಪಡಿಸಿರುವ 5600 kcal ನೀಡುವ ಪೌಷ್ಟಿಕ ಆಹಾರವನ್ನು, ಭದ್ರತಾ ಪಡೆಗಳಿಗೆ ಒದಗಿಸಲು ಸಹಾಯಕವಾಗುತ್ತದೆ.

## ರಾಜ್ಯದಲ್ಲಿ ಪಂಚಮಸಾಲಿ ಮೂರನೇ ಪೀಠ ಸ್ಥಾಪನೆ ಸಮರ್ಥಿಸಿಕೊಂಡ ಸಚಿವ ಮುರಗೇಶ್ ನಿರಾಣಿ

ಮೈಸೂರು : ರಾಜ್ಯದಲ್ಲಿ ಪಂಚಮಶಾಲಿ ಮೂರನೇ ಪೀಠ ಸ್ಥಾಪನೆಯನ್ನ ಸಚಿವ ಮುರಗೇಶ್ ನಿರಾಣಿ ಸಮರ್ಥಿಸಿಕೊಂಡಿದ್ದಾರೆ.



ನಗರದಲ್ಲಿ ಮಾತನಾಡಿದ ಸಚಿವ ಮುರುಗೇಶ್ ನಿರಾಣಿ, ಎರಡು ಪೀಠಗಳ ಸ್ವಾಮೀಜಿಗಳ ಒತ್ತಡ ಕಡಿಮೆ ಮಾಡಲು ಈ ಪೀಠದ ಅಗತ್ಯ ಇದೆ. ಆದರೆ ಈ ಪೀಠದ ಸ್ಥಾಪನೆ ಹಿಂದೆ ನಾನಿಲ್ಲ. ಆದರೆ ನನ್ನ ಸಂಪೂರ್ಣ ಬೆಂಬಲ ಇದಕ್ಕೆ ಇದೆ. ವಚನಾನಂದ ಸ್ವಾಮೀಜಿ ಸೇರಿ ಹಲವರು ಇದರ ಬೆಂಬಲಕ್ಕೆ ಇದ್ದಾರೆ. ಪೀಠ ಸ್ಥಾಪನೆಯ ಹಿಂದೆ ದುರುದ್ದೇಶದ ಪ್ರಶ್ನೆಯೇ ಇಲ್ಲ. ಸಮುದಾಯದ ಜನಸಂಖ್ಯೆ ಹೆಚ್ಚಿರುವ ಕಾರಣ ಮೂರನೇ ಪೀಠ ಅವಶ್ಯಕತೆ ಇದೆ. ಧಾರ್ಮಿಕ ಕಾರ್ಯಕ್ರಮ ಮದುವೆ ಸಮಾರಂಭದಲ್ಲಿ ಭಾಗಿಯಾಗಲು ಮೂರನೇ ಪೀಠ ಸ್ಥಾಪನೆ ಮಾಡಲಾಗಿದೆ. ಪೀಠ ಸ್ಥಾಪನೆಯ ಯಾವುದೇ ಸಭೆ ಸಮಾರಂಭಕ್ಕೆ ನಾನು ಹೋಗಿಲ್ಲ ಎಂದು ಹೇಳಿದರು.

ಮೂರನೇ ಪೀಠದ ಸ್ಥಾಪನೆ ವಿವಾದ ಸಂಬಂಧ ಈ ಬಗ್ಗೆ ನಾನೇ ಖುದ್ದಾಗಿ ಸ್ವಾಮೀಜಿಯನ್ನು ಭೇಟಿ ಮಾಡುವುದಿಲ್ಲ. ಅವರು ಕರೆದರೆ ನಾನು ಹೋಗಿ ಮಾತನಾಡುತ್ತೇನೆ ಎಂದು ಸಚಿವ ಮುರುಗೇಶ್ ನಿರಾಣಿ ತಿಳಿಸಿದರು.

ಮಠಕ್ಕೆ ಕೊಟ್ಟಿರುವ ಕಾಣಿಕೆ ವಾಪಸ್ಸು ನೀಡುವ ವಿಚಾರ ಕುರಿತು ಪ್ರತಿಕ್ರಿಯಿಸಿದ ಸಚಿವ ಮುರುಗೇಶ್ ನಿರಾಣಿ, ನಾನು ಕಾಣಿಕೆಯನ್ನು ಸ್ವಾಮೀಜಿಗೆ ಕೊಟ್ಟಿಲ್ಲ. ನಾನು ಕೊಟ್ಟಿರುವು ಪೀಠಕ್ಕೆ. ಕೊಟ್ಟಿರುವುದುನ್ನು ವಾಪಸ್ಸು ಕೇಳುವಷ್ಟು ಸಣ್ಣವನು ನಾನಲ್ಲ. ಇಂತಹ ಮನಸ್ಥಿತಿ ನನಗೆ ಇಲ್ಲ. ಬಲಗೈಯಲ್ಲಿ ಕೊಟ್ಟಿದ್ದು ಎಡಗೈಗೆ ಗೊತ್ತಾಗಬಾರದು. ಅದೇ ರೀತಿ ನಾನು ಪೀಠಕ್ಕೆ ನನ್ನ ಕೈಲಾದದನ್ನು ನೀಡಿದ್ದೇನೆ. ನಾನು ವಾಪಸ್ಸು ಕೇಳಿದ್ದೇನೆ ಎಂಬುದು ಸುಳ್ಳು. ಸ್ವಾಮೀಜಿಗೆ ಯಾರೋ ತಪ್ಪು ಮಾಹಿತಿ ನೀಡಿದ್ದಾರೆ. ದೂರವಾಣಿ ಮೂಲಕ ಮಾತನಾಡಿದರೂ ನಾನು ಸ್ಪಷ್ಟನೆ ನೀಡುತ್ತೇನೆ ಎಂದು ಸ್ಪಷ್ಟಪಡಿಸಿದರು.

ನಿರಾಣಿ ಸಹೋದರನಿಂದ ಧಮ್ಕಿ ವಿಚಾರ ಸಂಬಂಧ ಇದು ಸತ್ಯಕ್ಕೆ ದೂರವಾದ ಆರೋಪ. ಒಂದು ಕೆನ್ನೆಗೆ ಹೊಡೆದರೆ ಮತ್ತೊಂದು ಕೆನ್ನೆಗೆ ತೋರಿಸುವ ಗಾಂಧಿ ತತ್ವ ನಮ್ಮ ಮನೆಯ ಸಂಸ್ಕಾರ. ಇದರಲ್ಲಿ ಧಮ್ಕಿ ಹಾಕು ಪ್ರಶ್ನೆಯೇ ಇಲ್ಲ ಎಂದರು.

**ಸಿಎಂ ಬದಲಾವಣೆ ವಿಚಾರ ಕೇವಲ ಊಹಾಪೋಹ:**

ಸಚಿವ ಸಂಪುಟ ವಿಸ್ತರಣೆ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಸಚಿವ ಮುರುಗೇಶ್ ನಿರಾಣಿ, ಅದು ಸಿಎಂ ಪರಮಾಧಿಕಾರ ಅದರಲ್ಲಿ ನಮ್ಮ ಪಾತ್ರ ಇಲ್ಲ. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಪ್ರಶ್ನೆ ಇಲ್ಲ. ಬೊಮ್ಮಾಯಿ ಅವರು ತುಂಬಾ ಚೆನ್ನಾಗಿ ಕೆಲಸ ಮಾಡುತ್ತಿದ್ದಾರೆ. ರಾಷ್ಟ್ರೀಯ ನಾಯಕರು ಇದನ್ನು ಸ್ಪಷ್ಟಪಡಿಸಿದ್ದಾರೆ. ಈಗಾಗಿ ಸಿಎಂ ಬದಲಾವಣೆ ವಿಚಾರ ಕೇವಲ ಊಹಾಪೋಹ. ಮುಂದಿನ ಚುನಾವಣೆಯಲ್ಲಿ 130 ಸ್ಥಾನ ಪಡೆದು ಮತ್ತೆ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ಹಿಜಾಬ್, ಕೇಸರಿ ಶಾಲಿನ ಗಲಭೆ ಶಮನವಾಗುವವರೆಗೂ

# ಕಾಲೇಜುಗಳಿಗೆ ರಜೆ ಘೋಷಿಸಿ: ಸಿದ್ದರಾಮಯ್ಯ ಸಲಹೆ

ಬೆಂಗಳೂರು : ರಾಜ್ಯದಲ್ಲಿ ಪಿಯುಸಿ, ಡಿಗ್ರಿ ಹಾಗೂ ಪಿಜಿ ತರಗತಿಗೆ ರಜೆ ಘೋಷಿಸಿ. ಹಿಜಾಬ್, ಕೇಸರಿ ಶಾಲಿನ ಗಲಭೆ ಶಾಂತವಾಗುವ ತನಕ ತರಗತಿ ಬೇಡ. ಆನ್‌ಲೈನ್ ತರಗತಿ ನಡೆಸಿ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಸರ ಕಾರಕ್ಕೆ ಸಲಹೆ ನೀಡಿದ್ದಾರೆ.

ಈ ಕುರಿತಾಗಿ ಮಾತನಾಡಿರುವ ಸಿದ್ಧರಾಮಯ್ಯ, ಹಿಜಾಬ್ ಕುರಿತಾಗಿ ಸಂಘಪರಿವಾರ ಈ ವಿವಾದ ಹುಟ್ಟುಹಾಕಿದೆ. ಇದೀಗ ಎಲ್ಲ ಜಿಲ್ಲೆಗಳಿಗೆ ಹಬ್ಬುತ್ತಿದೆ. ಇದಕ್ಕೆ ಕೂಡಲೇ ಕಡಿವಾಣ ಹಾಕಬೇಕು. ವಿದ್ಯಾರ್ಥಿಗಳ ಮನಸ್ಸಿನಲ್ಲಿ



ಧರ್ಮ, ಜಾತಿ ಸುಳಿಯಬಾರದು. ಇದು ತೀವ್ರಗೊಂಡರೆ ಕಾನೂನು ಸುವ್ಯವಸ್ಥೆ ವಿಚಾರವಾಗಿದೆ.

ಅದ್ದರಿಂದ ಸರ್ಕಾರ ಕೂಡಲೇ ಪದವಿ ಪೂರ್ವ, ಪದವಿ ಹಾಗೂ ಸ್ನಾತಕ್ಕೋತ್ತರ ಕಾಲೇಜುಗಳನ್ನು ಕೂಡಲೇ ನಿಲ್ಲಿಸಿ ಆನ್‌ಲೈನ್ ತರಗತಿ ಆರಂಭಿಸಿ. ವಿವಾದ ತಿಳಿಯಾದ ಬಳಿಕ ತರಗತಿ ಪ್ರಾರಂಭಿಸಿ ಎಂದಿರುವ ಅವರು ಪರೀಕ್ಷಾ ಸಮಯ ಆಗಿರುವುದರಿಂದ ಆನ್‌ಲೈನ್ ಮೂಲಕ ತರಗತಿ ನಡೆಸುವಂತೆ ವಿಪಕ್ಷ ನಾಯಕ ಸಿದ್ದರಾಮಯ್ಯ ಸಲಹೆ ನೀಡಿದ್ದಾರೆ.

## ಕೊರೊನಾ ಲಸಿಕೆಗೆ ಆಧಾರ್ ಕಡ್ಡಾಯವಲ್ಲ: ಸುಪ್ರೀಂ ಕೋರ್ಟ್ ಸೂಚನೆ



ಬೆಂಗಳೂರು : ಆಧಾರ್ ಕಡ್ಡಾಯ ವಿಷಯಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮಹತ್ವದ ಸೂಚನೆ ನೀಡಿದೆ.

ಕೊರೊನಾ ಲಸಿಕೆಗೆ ಸಂಬಂಧಿಸಿದಂತೆ ಆಧಾರ್ ಕಡ್ಡಾಯವಾಗಿ ಕೇಳದಂತೆ ಕೋರ್ಟ್ ನಿರ್ದೇಶನ ನೀಡಿದೆ.

ಕೊರೊನಾ ಲಸಿಕೆಗೆ ಆಧಾರ್ ಕಾರ್ಡ್ ಕಡ್ಡಾಯವಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಎಲ್ಲಾ ಅಧಿಕಾರಿಗಳಿಗೆ ಕೊರೊನಾ ಲಸಿಕೆಗಾಗಿ ಆಧಾರ್ ಕಾರ್ಡ್‌ಗೆ ಒತ್ತಾಯಿಸದಂತೆ ನ್ಯಾಯಮೂರ್ತಿಗಳು ಸೂಚನೆ ನೀಡಿದ್ದಾರೆ.

## ಪ್ರತಿಭಟನೆಗಷ್ಟೇ ಸೀಮಿತವಾದ ಮೈಸೂರು ಬಂದ್

ಮೈಸೂರು : ರಾಯಚೂರು ಜಿಲ್ಲಾ ನ್ಯಾಯಾಧೀಶ ಮಲ್ಲಿಕಾರ್ಜುನಗೌಡ ಹೇಳಿಕೆ ಖಂಡಿಸಿ ನಿನ್ನೆ ನಾನಾ ಸಂಘಟನೆಗಳು ಮೈಸೂರು ಬಂದ್‌ಗೆ ಕರೆಗೆ ನಗರದಲ್ಲಿ ಮಿಶ್ರ ಪ್ರತಿಕ್ರಿಯೆ ಕಂಡುಬಂದಿದ್ದು, ಬಂದ್ ಪ್ರತಿಭಟನೆಗಷ್ಟೇ ಸೀಮಿತಗೊಂಡಿತ್ತು.

ಮೈಸೂರು ಬಂದ್ ಹಿನ್ನೆಲೆಯಲ್ಲಿ ಬಸ್‌ಗಳನ್ನು ಪ್ರಗತಿಪರ ಸಂಘಟನೆಗಳು ತಡೆ ಹಿಡಿದಿವೆ. ಮಾರುಕಟ್ಟೆಗಳು ಬಂದ್ ಆಗಿವೆ. ಪ್ರಗತಿಪರ ಸಂಘಟನೆಗಳು ಬಂದ್ ಯಶಸ್ಸಿಗಾಗಿ ರಸ್ತೆಗೆ ಇಳಿದಿದ್ದಾರೆ.

ನ್ಯಾಯಾಧೀಶ ಮಲ್ಲಿಕಾರ್ಜುನ ಗೌಡ ಅವರ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದರು. ಬಂದ್‌ಗೆ ಸಹಕರಿಸುವಂತೆ ನಾಗರೀಕರಲ್ಲಿ ಮನವಿ ಮಾಡಿದ್ದರು. ಬೆಳ್ಳಂಬೆಳಗ್ಗೆ ಎಂ.ಜಿ.ಮಾರುಕಟ್ಟೆಗೆ ಆಗಮಿಸಿದ ಸಂಘಟನೆಗಳ ಮುಖಂಡರು ವ್ಯಾಪಾರ ವಹಿವಾಟನ್ನು ಸ್ಥಗಿತಗೊಳಿಸುವಂತೆ ಮನವಿ ಮಾಡಿದ್ದರು.

ನಗರದ ಕೇಂದ್ರ ಬಸ್ ನಿಲ್ದಾಣ ಬಳಿ ಸೇರಿದ ಪ್ರತಿಭಟನಾಕಾರರು ಕೆ.ಎಸ್.ಆರ್.ಟಿ.ಸಿ ಬಸ್ ತಡೆ ಹಿಡಿದಿದ್ದರು. ರಸ್ತೆ ತಡೆ ನಡೆಸಿ ಆಕ್ರೋಶ ವ್ಯಕ್ತಪಡಿಸುತ್ತಿದ್ದರು. ಕೆಲವು ಹೋಟೆಲ್ ಬಾಗಿಲು ಎಳೆದು ಬಲವಂತವಾಗಿ ಮುಚ್ಚಿಸಿದ್ದರು. ದಲಿತ ಸಂಘಟನೆಗಳು, ಪ್ರಗತಿಪರ ಸಂಘಟನೆಗಳಿಂದ ಬಂದ್‌ಗೆ ಕರೆ ನೀಡಲಾಗಿತ್ತು.

ಪುರಭವನದ ಎದುರು ನಡೆದ ಬೃಹತ್ ಸಂಖ್ಯೆಯಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಇತ್ತೀಚಿನ ದಿನಗಳಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಮತ್ತು ಸಂವಿಧಾನದ ಬಗ್ಗೆ ಹಾದಿ ಬೀದಿಗಳಲ್ಲಿ ಮಾತನಾಡುತ್ತಾ ಅಪಮಾನಿಸುತ್ತಿರುವ ಪ್ರಸಂಗಗಳು ನಡೆಯುತ್ತಿವೆ. ಆ ಮೂಲಕ ಅಂಬೇಡ್ಕರ್ ಮತ್ತು ಸಂವಿಧಾನಕ್ಕೆ ಅಪಚಾರವೆಸಗುತ್ತಾ ಮತೀಯ ಮನಸ್ಸುಗಳು ವಿಜೃಂಭಿಸುತ್ತಿವೆ.

ಇದಕ್ಕೆ ಪೂರಕವಾಗಿ ಕೇಂದ್ರ ಮತ್ತು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಗಳು ಚಕಾರವೆತ್ತದೆ ಅಂತಹ ಅಸಂವಿಧಾನಿಕ ಕೃತ್ಯಗಳನ್ನು ನಡೆಸುತ್ತಿರುವವರನ್ನು ಕಾನೂನಿನ ಚೌಕಟ್ಟಿನಲ್ಲಿ ಶಿಕ್ಷೆಗೆ ಗುರಿಪಡಿಸದೇ ಅವರ ನಡವಳಿಕೆ ಬಗ್ಗೆ ಮೃದುಧೋರಣೆ ಅನುಸರಿಸುತ್ತಿರುವುದನ್ನು ಗಮನಿಸಿದಾಗ ಮುಂದೆ ಅಂಬೇಡ್ಕರ್ ಅವರು ನಮಗೆ ಕೊಟ್ಟ ಸಂವಿಧಾನಬದ್ಧ ಹಕ್ಕುಗಳನ್ನು ಮೊಟಕುಗೊಳಿಸಿ ನಮ್ಮನ್ನು ಹಿಂದಿದ್ದ ಗುಲಾಮಗಿರಿ ಸಂಸ್ಕೃತಿಗೆ ಕೊಂಡೊಯ್ಯುವ ದುರಾಲೋಚನೆ ಕಂಡು ಬರುತ್ತದೆ ಎಂದು ಆರೋಪಿಸಿದರು.

ಪ್ರಸಕ್ತ ದಿನಗಳಲ್ಲಿ ಸಂವಿಧಾನ ಅಪಾಯದ ಅಂಚಿನಲ್ಲಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದ್ದು ಇಂತಹ ಸಮಯದಲ್ಲಿ ನಾವುಗಳು ಎಚ್ಚೆತ್ತುಕೊಂಡು ಸಂವಿಧಾನದ ರಕ್ಷಣೆಗೆ ಮುಂದಾಗದ ಹೊರತು ಮುಂದೆ ಆಗಬಹುದಾದ ಅನಾಹುತಗಳಿಗೆ ನಾವುಗಳೇ ಬಾಧ್ಯರಾಗುವ ಕಾರಣದಿಂದ ಈ ನಿಟ್ಟಿನಲ್ಲಿ ಚಿಂತಿಸಿ ಸಂವಿಧಾನ ರಕ್ಷಣೆ ಮಾಡುವ ನಿಟ್ಟಿನಲ್ಲಿ ಪ್ರಜಾ ಸರ್ಕಾರವನ್ನು ಎಚ್ಚರಿಸುವ ಗುರುತರವಾದ ಜವಾಬ್ದಾರಿ ನಮ್ಮ ಮೇಲಿದ್ದು ಇದಕ್ಕೆ ಪೂರಕವಾಗಿ ನಾವುಗಳು ಜಾಗೃತರಾಗಿ ಸಂವಿಧಾನ ರಕ್ಷಣಾ ಕಾರ್ಯದಲ್ಲಿ ತೊಡಗಿಕೊಳ್ಳಬೇಕಾಗಿರುತ್ತದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಬಾಬಾ ಸಾಹೇಬ ಅಂಬೇಡ್ಕರ್ ಅವರ ಸಮ ಸಮಾಜದ ಕನಸನ್ನು ನನಸು ಮಾಡಲು ಕಟಿಬದ್ಧರಾಗಬೇಕು. ನ್ಯಾಯಾಧೀಶ ಅವರ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದರು.

## ಹೊಗೆನಕಲ್ ಜಲಪಾತ, ಪಾದದರೆ ಐತಿಹ್ಯ ಸ್ಥಳಗಳಿಗೆ ಸುತ್ತೂರು ಶ್ರೀ ಭೇಟಿ





ಹನೂರು : ತಾಲೂಕಿನ ಪ್ರಸಿದ್ಧ ಯಾತ್ರಾ ಸ್ಥಳ ಶ್ರೀ ಮಲೆಮಹದೇಶ್ವರ ಬೆಟ್ಟಕ್ಕೆ ಭೇಟಿ ನೀಡಿದ ಸುತ್ತೂರು ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ಅವರು ಮಲೆಮಹದೇಶ್ವರ ಬೆಟ್ಟ ಸೇರಿದಂತೆ ಸುತ್ತಲಿನ ಪ್ರದೇಶಗಳಿಗೆ ಭೇಟಿ ನೀಡಿದರು.

ಹೊಗೆನಕಲ್ ಜಲಪಾತಕ್ಕೆ ತೆರಳಿದ ಸುತ್ತೂರು ಶ್ರೀಗಳು ತೆಪ್ಪದ ಮೂಲಕ ಜಲಾಶಯದ ವೈಭವ ವೀಕ್ಷಿಸಿದರು. ಹೊಗೆನಕಲ್ ಫಾಲ್ಸ್‌ನ ಅಭಿವೃದ್ಧಿಯ ಬಗ್ಗೆ ಡಿಎಫ್‌ಒ ಏಡುಕುಂಡಲು ಅವರಿಂದ ಮಾಹಿತಿ ಪಡೆದ ಸ್ವಾಮೀಜಿ ಮಾದಪ್ಪನ ಭಕ್ತರಿಗೆ ಹಾಗೂ ಪ್ರವಾಸಿಗರಿಗೆ ಅಗತ್ಯ ಮೂಲ ಸೌಕರ್ಯ ಒದಗಿಸಿಕೊಡಲು ಕ್ರಮವಹಿಸಬೇಕು. ಜಲಪಾತಕ್ಕೆ ಪ್ರವಾಸಿಗರನ್ನು ಸೆಳೆಯಬೇಕು. ಮತ್ತಷ್ಟು ಅಭಿವೃದ್ಧಿಯಾಗಬೇಕೆಂದು ಅಧಿಕಾರಿಗಳಿಗೆ ಸಲಹೆ ನೀಡಿದರು.

ಮಲೆಮಹದೇಶ್ವರಬೆಟ್ಟಕ್ಕೆ ಕಾವೇರಿ ನೀರು ಸರಬರಾಜಾಗುವ ಜಾಕ್ವೆಲ್ ಘಟಕ, ಜುಂಜೇಗೌಡರು ಪೂಜಿಸುತ್ತಿದ್ದ ರಂಗನಾಥ ದೇವಾಲಯಕ್ಕೆ ಭೇಟಿ ನೀಡಿ ಪ್ರಾಧಿಕಾರದ ಅಧಿಕಾರಿಗಳಿಗೆ ಸಲಹೆ ನೀಡಿದರು.

ಐತಿಹ್ಯವಿರುವ ಪಾದಧರೆ ಕ್ಷೇತ್ರಕ್ಕೆ ಶ್ರೀಗಳು ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ಪಾದಧರೆಯು ಪವಾಡ ಪುರುಷರ ಪುಣ್ಯಕ್ಷೇತ್ರವಾಗಿದ್ದು ಪ್ರಕೃತಿಯ ಮಡಿಲಲ್ಲಿದೆ. ಮಲೆಮಾದೇಶ್ವರ ಪಾದುಕೆ ಇರುವ ಶಿಲಾ ಸನ್ನಿಧಿಗೆ ವಿಶೇಷವಾಗಿ ಶ್ರೀಗಳು ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಾಲೂರು ಬೃಹನ್ಮಠದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಮಲೆ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಧರ್ಶಿ ಜಯವಿಭವಸ್ವಾಮಿ, ಡಿಸಿಎಫ್ ಏಡುಕೊಂಡಲು ಸೇರಿದಂತೆ ಇತರರು ಹಾಜರಿದ್ದರು.



## ಕುರಿ ಕಳ್ಳರ ಬಂಧನ: ಆಟೋ ವಶ

ನಂಜನಗೂಡು: ತಗಡೂರು ಮತ್ತು ಕಾರ್ಯ ಗ್ರಾಮಗಳಲ್ಲಿ ಕುರಿ ಟಗರು ಮತ್ತು ಮೇಕೆಗಳನ್ನು ಕಳ್ಳತನ ಮಾಡುತ್ತಿದ್ದ ಆರೋಪಿಗಳನ್ನು ಕೌಲಂದೆ ಠಾಣೆಯ ಪಿಎಸ್‌ಐ ಮಹೇಂದ್ರ ಮತ್ತು ಸಿಬ್ಬಂದಿಗಳು ಕಳ್ಳರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಆರೋಪಿಗಳಿಂದ ಸುಮಾರು ಒಂದು ಲಕ್ಷ ಮೌಲ್ಯದ 4 ಟಗರು ಮೂರು ಕುರಿ ಎರಡು ಮೇಕೆಗಳನ್ನು ಮತ್ತು ಕಳ್ಳತನಕ್ಕೆ ಬಳಸಿದ ಲ್ಯಾಂಡ್ ಆಟೋವನ್ನು ವಶಕ್ಕೆ ಪಡೆಯಲಾಗಿದೆ.

ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಲಾಗಿದೆ ಪತ್ತೆ ಕಾರ್ಯದಲ್ಲಿ ಕೌಲಂದೆ ಠಾಣೆಯ ಸಿಬ್ಬಂದಿಗಳಾದ ಎಎಸ್‌ಐಗಳಾದ ಮಂಚಗಯ್ಯ ಬಸವರಾಜು ಸ್ವಾಮಿನಾಯಕ ಚಂದ್ರು ಮತ್ತು ಶಿವಕುಮಾರ್ ವಿಜಯಕುಮಾರ್ ಲಿಂಗದೇವರು ಮುರುಳಿದರನ್ ಪಿಸಿಗಳಾದ ಶಿವಕುಮಾರ್ ಪರಶಿವಮೂರ್ತಿ ಗಣೇಶ್ ಲೋಕೇಶ್ ಪುನೀತ್ ನಿಂಗರಾಜು ಕೆಂಪರಾಜು ಕರ್ತವ್ಯ ನಿರ್ವಹಿಸಿದರು.

## ಇಂದು ಕೃಷಿ ಮತ್ತು ಸಮಾಜಸೇವಾ ಪ್ರಶಸ್ತಿ ಪ್ರದಾನ ಸಮಾರಂಭ

ಮಂಡ್ಯ: ಹನಕೆರೆ ಎಂ. ಶ್ರೀನಿವಾಸ್ ಪ್ರತಿಷ್ಠಾನದ ವತಿಯಿಂದ ಫೆ.9 ರ ಬುಧವಾರ ನಗರದ ಕರ್ನಾಟಕ ಸಂಘದ ಆವರಣದಲ್ಲಿ ಸಂಜೆ 4.30 ಕ್ಕೆ ಅರಸಮ್ಮ ಮೆಣಸೇಗೌಡ ಕೃಷಿ ಪ್ರಶಸ್ತಿ ಮತ್ತು ಎಂ. ಶ್ರೀನಿವಾಸ್ ಸಮಾಜ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಡಿ.ಶಿವರಾಜು ಕೀಲಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಈ ಸಮಾರಂಭದ ಅಧ್ಯಕ್ಷತೆಯನ್ನು ಅಬಕಾರಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಗೋಪಾಲಯ್ಯ ವಹಿಸಲಿದ್ದು, ಉದ್ಘಾಟನೆ ಹಾಗೂ ಎಂ.ಶ್ರೀನಿವಾಸ್ ಚಿತ್ರಸಂಪುಟ ಬಿಡುಗಡೆಯನ್ನು ವಿಶ್ರಾಂತ ಕುಲಪತಿ ಕೆ.ಎಸ್.ರಂಗಪ್ಪ ನಡೆಸಿಕೊಡುವರು.




ಅರಸೀಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಪ್ರಶಸ್ತಿ ಪ್ರದಾನ ಮಾಡಲಿದ್ದು, ಕರ್ನಾಟಕ ಸಂಘದ ಅಧ್ಯಕ್ಷ ಬಿ.ಜಯಪ್ರಕಾಶಗೌಡ ಅಭಿನಂದನಾ ನುಡಿಗಳನ್ನಾಡಲಿದ್ದಾರೆ .

ಅರಸಮ್ಮ ಮೆಣಸೇಗೌಡ ಕೃಷಿ ಪ್ರಶಸ್ತಿಯನ್ನು ಹೊನ್ನಾಯಕನಹಳ್ಳಿ ಪ್ರಗತಿಪರ ರೈತ ಹೆಚ್.ಎಸ್.ನಿರಂಜನ್ ಅವರಿಗೆ, ಎಂ.ಶ್ರೀನಿವಾಸ್ ಸಮಾಜಸೇವಾ ಪ್ರಶಸ್ತಿಯನ್ನು ಹಾಸನ ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಜಿ.ಎಲ್.ಮುದ್ದೇಗೌಡ ಅವರಿಗೆ, ಎಂ. ಶ್ರೀನಿವಾಸ್ ವಿಶೇಷ ಸಮಾಜ ಸೇವಾ ಪ್ರಶಸ್ತಿಯನ್ನು ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕರಾದ ಡಾ॥ಸಿ.ಎನ್. ಮಂಜುನಾಥ್ ಅವರಿಗೆ ಪ್ರದಾನ ಮಾಡಲಾಗುವುದು ಹಾಗೂ ನೀಟ್ ಪರೀಕ್ಷೆಯಲ್ಲಿ ಐದನೇ ರ್‍ಯಾಂಕ್ ಗಳಿಸಿರುವ ಡಾ॥ದರ್ಶನ್ ಎಸ್ ಗೌಡ ಅವರನ್ನು ಅಭಿನಂದಿಸಲಾಗುವುದು ಎಂದರು.

ಜಿಲ್ಲೆಯ ವಿವಿಧ ಕ್ಷೇತ್ರಗಳ ಸಾಧಕರಾದ ನಾಗರಾಜು (ಶಿಕ್ಷಣ) ಎ.ಆರ್. ಬಾಲಕೃಷ್ಣ (ಸಾಹಿತ್ಯ) ನಿಶ್ಚಯ್ ಜೈನ್ (ಸಂಗೀತ) ಮಹಮ್ಮದ್ ಸುಲೇಮಾನ್ (ವಿಜ್ಞಾನ) ವಿಶೇಷ ಚೇತನ ಯೋಗೇಶ್ ಕಚ್ಚಿಗೆರೆ ಹಾಗೂ ಆಶಿಕಾ ರಾಮಚಂದ್ರ (ಕ್ರೀಡಾ) ಅವರುಗಳನ್ನು ಅಭಿನಂದಿಸಲಾಗುವುದು ಎಂದು ಅವರು ತಿಳಿಸಿದರು.

ಗೋಷ್ಠಿಯಲ್ಲಿ ಹನಕೆರೆ ಎಂ. ಶ್ರೀನಿವಾಸ್ ಪ್ರತಿಷ್ಠಾನದ ಕಾರ್ಯದರ್ಶಿ ಹೆಚ್.ಬಿ.ನಾಗಪ್ಪ, ಉಪಾಧ್ಯಕ್ಷ ತಗ್ಗಳ್ಳಿ ವೆಂಕಟೇಶ್, ಜಿ.ಎನ್. ಶಿವರುದ್ರಪ್ಪ, ಜಿ.ಕೆ. ಮಹೇಂದ್ರ ಉಪಸ್ಥಿತರಿದ್ದರು.

ಕ್ರಾಂತಿಯ ಕಿಡಿ
ಕಾಯಕ ಯೋಗಿ
ಸಂಪಾದಕರು : ಬಿ.ಕೆ. ಅರುಣಜ್ಯೋತಿ KAYAKAYOGI - Morning Daily ಕನ್ನಡ ದಿನಪತ್ರಿಕೆ
ದಿನಾಂಕ 09-02-2022 ಬುಧವಾರ

ಶ್ರೀರಂಗಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ರಥಸಪ್ತಮಿ ಅಂಗವಾಗಿ 108 ಸೂರ್ಯ ನಮಸ್ಕಾರಗಳನ್ನು ಯಜ್ಞ ಕ್ರೀಡಾ ಭಾರತಿ ಹಾಗೂ ಅಚೀವರ್ಸ್ ಅಕಾಡೆಮಿ ವತಿಯಿಂದ ಮಾಡಲಾಯಿತು.



ಆರೋಗ್ಯದಿಂದಿರಿ – ಸುರಕ್ಷಿತವಾಗಿರಿ, ನಾವೆಲ್ಲರೂ ಒಟ್ಟಾಗಿ ಕೊರೋನಾ ವಿರುದ್ಧ ಹೋರಾಡೋಣ

# ಪಾಂಡವಪುರ, ಶ್ರೀರಂಗಪಟ್ಟಣದಲ್ಲೂ ಹಿಜಾಬ್ ಕೇಸರಿ ಸಂಘರ್ಷ

**ಪಾಂಡವಪುರ:** ರಾಜ್ಯಾದಾದ್ಯಂತ ಹಿಜಾಬ್ ನಿಷೇದಿಸಬೇಕು ಹಾಗೂ ಏಕರೂಪ ಸಮವಸ್ತ್ರ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಕಾಲೇಜು ವಿದ್ಯಾರ್ಥಿಗಳು ಕೇಸರಿ ಶಾಲು ಧರಿಸಿ ಕಾಲೇಜು ಪ್ರವೇಶ ಮಾಡಲು ಮಂಗಳವಾರ ಪ್ರಯತ್ನಿಸಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ವಿಜಯ ಪ್ರಥಮ ದರ್ಜೆ ಕಾಲೇಲು ವಿದ್ಯಾರ್ಥಿಗಳು ಕೇಸರಿ ಶಾಲು ಧರಿಸಿ ಕಾಲೇಜಿಗೆ ಆಗಮಿಸಿದ್ದರು. ಕಾಲೇಜು ಮುಂಭಾಗ ಜಮಾವಣೆಗೊಂಡ ವಿದ್ಯಾರ್ಥಿಗಳು ಜೈ ಶ್ರೀರಾಮ್, ಜೈ ಹನುಮಾನ್, ವಂದೇ ಮಾತಾರಂ, ನಾವೆಲ್ಲ ಹಿಂದು, ನಾವೆಲ್ಲ ಒಂದು, ಹನುಮಾನ ಆಣೆ ಹೋರಾಟ ಕೈಬಿಡಲ್ಲ ಎಂಬಿತ್ಯಾದಿ ಜೈಕಾರದ ಘೋಷಣೆಗಳನ್ನು ಕೂಗಿದರು. ಜತೆಗೆ ರಾಜ್ಯಾದ್ಯಂತ ಹಿಜಾಬ್ ನಿಷೆಧಿಸಿ ಏಕರೂಪ ಸಮವಸ್ತ್ರ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ಸರ್ಕಾರ ಹಿಜಾಬ್ ಧರಿಸದಂತೆ ಕಾನೂನು ಏಕರೂಪ ಸಮವಸ್ತ್ರ ಸಂಹಿತೆ ಜಾರಿಗೊಳಿಸಬೇಕು. ಶೇ.23 ರಷ್ಟಿರುವ ಜನಾಂಗದವರೇ ಈ ರೀತಿ ಕಾಲೇಜುಗಳಿಗೆ ಹಿಜಾಬ್ ಧರಿಸಿ ಬರುತ್ತಾರೆ. ಬಹುಸಂಖ್ಯಾತರಾಗಿ ನಾವು ನಮ್ಮ ಧರ್ಮ ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಉಡುಪು ಧರಿಸುತ್ತೇವೆ. ಒಬ್ಬರಿಗೆ ಒಂದೊಂದು ಕಾನೂನು ದೇಶದಲ್ಲಿ ಇದ್ದೀಯೇ, ಅವರು ಹಿಜಾಬ್ ಧರಿಸಿ ಕಾಲೇಜು ಪ್ರವೇಶಿಸಿದರೆ ನಾವು ಪಂಚೆ, ಕೇಸರಿ ಶಾಲು ಹಾಗೂ ವಿದ್ಯಾರ್ಥಿನಿಯರು ಸೀರೆ ಧರಿಸಿ ಕಾಲೇಜಿಗೆ ಬರುತ್ತೇವೆ ಎಂದು ವಿದ್ಯಾರ್ಥಿಗಳು ಹೇಳಿದರು.

ಹೈಕೋರ್ಟ್ ಆದೇಶ ಬರೋವರೆಗೆ ನಾವು ಕಾಯುತ್ತೇವೆ. ಕೆಸರಿ ಶಾಲು ಧರಿಸಿ ಕಾಲೇಜಿಗೆ ಬರುವ ವಿದ್ಯಾರ್ಥಿಗಳಿಗೆ ಪ್ರವೇಶ ನಿರಾಕರಿಸಿದರೆ ನಾವು ಧರಣಿ, ಪ್ರತಿಭಟನೆ ನಡೆಸುತ್ತೇವೆ. ಕಾಲೇಜು ಆಡಳಿತ ಮಂಡಳಿ ನಮ್ಮ ವಿರುದ್ಧ ಕ್ರಮ ಕೈಗೊಂಡರು ನಾವು ಹೆದರಲ್ಲ ಎಂದು ವಿದ್ಯಾರ್ಥಿಗಳು ಹೇಳಿದರು.

ಬಳಿಕ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು ಬಾಲಕಿಯರ ಕಾಲೇಜು, ವಿಜಯ ಪ್ರಥಮ ದರ್ಜೆ ಕಾಲೇಜುಗಳಿಗೆ ತೆರಳಿ ಅಲ್ಲಿಯೂ ಹಿಂದು ಪರ ಘೋಷಣೆಗಳನ್ನು ಕೂಗಿದರು. ಬಳಿಕ ಪಟ್ಟಣದ ಪ್ರಮುಖದ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು.

ಶಾಲು ಧರಿಸಿ ಕಾಲೇಜು ಪ್ರವೇಶಿಸದಂತೆ ಕಾಲೇಜು ಅಧ್ಯಾಪಕರು ವಿದ್ಯಾರ್ಥಿಗಳನ್ನು ತಡೆದರು.

ವಿಜಯಕಾಲೇಜು ವಿದ್ಯಾರ್ಥಿಗಳು ಶಾಲು ಧರಿಸಿ ಕಾಲೇಜು ಪ್ರವೇಶಿದರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು ಮಧ್ಯಾಹ್ನದ ಬಳಿಕ ಕಾಲೇಜಿಗೆ ತೆರಳಿದರು.





ಶ್ರೀರಂಗಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ವಿದ್ಯಾರ್ಥಿಗಳು ಕೇಸರಿ ಶಾಲು ಧರಿಸಿ ಕಾಲೇಜಿಗೆ ಆಗಮಿಸಿದರು.

**ಶ್ರೀರಂಗಪಟ್ಟಣ ವರದಿ:** ನಾಲ್ಕೈದು ಮಂದಿ ಮುಸ್ಲೀಂ ವಿದ್ಯಾರ್ಥಿನಿಯರು ನಿತ್ಯ ಹಿಜಾಬ್ ಧರಿಸಿ ಕಾಲೇಜಿಗೆ ಆಗಮಿಸಿ ಪಾಠ ಪ್ರವಚನ ಕೇಳುತ್ತಿದ್ದ ಹಿನ್ನಲೆಯಲ್ಲಿ ಮಂಗಳವಾರ ಕೆಲ ಹಿಂದು ವಿದ್ಯಾರ್ಥಿಗಳು ಕೇಸರಿ ಶಾಲು ಧರಿಸಿ ತರಗತಿಗೆ ಹಾಜರಾದ ಘಟನೆ ನಡೆಯಿತು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಈ ಘಟನೆ ನಡೆದಿದ್ದು, ಮುಸ್ಲೀಂ ಯುವತಿಯರು ಸಮವಸ್ತ್ರವನ್ನು ಧರಿಸದೇ ಹಿಜಾಬ್ ಧರಿಸಿ ಕಾಲೇಜಿಗೆ ಬರುತ್ತಿರುವುದನ್ನು ಖಂಡಿಸಿದ ಹಿಂದು ವಿದ್ಯಾರ್ಥಿಗಳು ಸಹ ಕೇಸರಿ ಶಾಲು ಧರಿಸಿ ಕೊಠಡಿಯಲ್ಲಿ ಕುಳಿತು ಪಾಠ ಪ್ರವಚನ ಕೇಳಿದರು. ಕಳೆದ ಕೆಲ ದಿನಗಳಿಂದ ಜಿಲ್ಲೆ ಸೇರಿದಂತೆ ಕೆ.ಆರ್.ಪೇಟೆ ಹಾಗೂ ಪಾಂಡವಪುರ ತಾಲೂಕಿನಲ್ಲಿದ್ದ ವಿದ್ಯಾರ್ಥಿಗಳ ಹಿಜಾಬ್ ಹಾಗೂ ಕೇಸರಿ ಶಾಲು ಪ್ರಕರಣ ಶ್ರೀರಂಗಪಟ್ಟಣಕ್ಕೂ ವಿಸ್ತರಿಸಿದೆ.

ಕಾಲೇಜಿನ ಪ್ರಾಧ್ಯಾಪಕರು ಇದ್ಯಾವುದನ್ನೂ ಪ್ರಶ್ನಿಸದೇ ಸರ್ಕಾರ ಹಾಗೂ ನ್ಯಾಯಾಲಯ ತೀರ್ಮಾನ ತೆಗೆದುಕೊಳ್ಳಲಿ ಎಂದು ಮೌನಕ್ಕೆ ಶರಣಾಗಿ ಪಾಠ, ಪ್ರವಚನ ನಡೆಸಿದರು. ಕಾಲೇಜಿನಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸರು ಎಚ್ಚರವಹಿಸಿ, ಬಂದೋಬಸ್ತ್ ನೀಡಿದರು. ವಿದ್ಯಾರ್ಥಿಗಳು ಸಹ ಯಾವುದೇ ಗಲಾಟೆಗಳಿಗೆ ಮುಂದಾಗದೇ ಎಂದಿನಂತೆ ತರಗತಿ ಮುಗಿಸಿ ಮನೆಗಳಿಗೆ ತೆರಳಿದರು.

### ಮಂದಗೆರೆ ರೈಲು ನಿಲ್ದಾಣದ ಬಳಿ ಅಂಡರ್‌ಪಾಸ್‌ಗೆ ವಿರೋಧ

# ರೈತಸಂಘದಿಂದ ಪ್ರತಿಭಟನೆ

**ಕೆ.ಆರ್.ಪೇಟೆ:** ತಾಲ್ಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಮಂದಗೆರೆ ಗ್ರಾಮದಲ್ಲಿನ ರೈಲ್ವೆ ನಿಲ್ದಾಣದ ಮೂಲಕ ಹೊಳೆನರಸೀಪುರ ಮತ್ತು ಕೆ.ಆರ್.ಪೇಟೆ ತಾಲ್ಲೂಕುಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಯ ರೈಲ್ವೆ ಗೇಟ್‌ನಲ್ಲಿ ಇಲಾಖೆಯು ಅಂಡರ್‌ಪಾಸ್ ರಸ್ತೆ ನಿರ್ಮಿಸಲು ಮುಂದಾಗಿರುವುದನ್ನು ವಿರೋಧಿಸಿ ರೈತ ಸಂಘದ ಕಾರ್ಯಕರ್ತರು ಹಾಗೂ ತಾಲ್ಲೂಕು ನಾಗರೀಕ ಹಿತರಕ್ಷಣಾ ಸಮಿತಿಯ ಸಾವಿರಾರು ಮಂದಗೆರೆ ಬಳಿ ರೈಲ್ವೆ ಗೇಟ್ ಬಳಿ ಪ್ರತಿಭಟನೆ ನಡೆಸಿದರು.

ರೈತಸಂಘದ ಮುಖಂಡರು ಹಾಗೂ ಕಾರ್ಯಕರ್ತರು ರೈಲ್ವೆ ಅಂಡರ್‌ಪಾಸ್ ಬದಲು ರೈಲ್ವೇ ಮೇಲ್ಸೇತುವೆ ನಿರ್ಮಿಸುವಂತೆ ಆಗ್ರಹಿಸಿ ಘೋಷಣೆ ಕೂಗಿದರು. ಈ ಮಾರ್ಗದಲ್ಲಿ ಬೆಳೆದಿರುವ ಕಬ್ಬು, ಎಳೆನೀರು ತುಂಬಿಕೊಂಡು ಲಾರಿಗಳು ಟ್ರಾಕ್ಟರ್‌ಗಳು ಚಲಿಸಲು ತೊಂದರೆಯಾಗಲಿದೆ. ಹಾಗಾಗಿ ಮೇಲ್ಸೇತುವೆ ನಿರ್ಮಾಣ ಮಾಡಿ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದರು. ರೈಲ್ವೆ ಹಳಿ ದಾಟಲು ಇದ್ದ ಗೇಟ್ ಬಳಿ ಅಂಡರ್ ಪಾಸ್ ರಸ್ತೆ ನಿರ್ಮಾಣ ಮಾಡಲು ಮುಂದಾಗಿರುವ ಇಲಾಖೆ ಕೇವಲ 14 ಅಡಿ ಅತ್ತರದ ಅಂಡರ್ ಪಾಸ್ ನಿರ್ಮಾಣ ಮಾಡಿದರೆ ರೈತರ ಟ್ರಾಕ್ಟರ್‌ಗಳು ಮತ್ತು ಲಾರಿಗಳು ಕಬ್ಬು, ಎಳೆನೀರು ತುಂಬಿಕೊಂಡು ಓಡಾಡಲು ಸಾಧ್ಯವಾಗುವುದಿಲ್ಲ. ಹಾಗಾಗಿ ರೈಲ್ವೆ ಇಲಾಖೆಯ ಅಧಿಕಾರಿಗಳು ಅಂಡರ್‌ಪಾಸ್ ರಸ್ತೆ ಬದಲು ಮೇಲ್ಸೇತುವೆ ನಿರ್ಮಿಸಿಕೊಡಬೇಕೆಂದು ಘೋಷಣೆ ಕೂಗಿದರು.

ಪ್ರತಿಭಟನೆಯಲ್ಲಿ ರೈತಸಂಘದ ತಾಲ್ಲೂಕು ಅಧ್ಯಕ್ಷ ಪುಟ್ಟೇಗೌಡ, ತಾಲ್ಲೂಕು ನಾಗರೀಕ ಹಿತರಕ್ಷಣಾ ಸಮಿತಿ ಅಧ್ಯಕ್ಷ ನಾಟನಹಳ್ಳಿ ಗಂಗಾಧರ್, ತಾಲ್ಲೂಕು ರೈತ ಸಂಘದ ಪ್ರಧಾನ ಕಾರ್ಯದರ್ಶಿ ಬೂಕನಕೆರೆ ನಾಗರಾಜು, ಜಿಲ್ಲಾ ಉಪಾಧ್ಯಕ್ಷ ಮರುವನಹಳ್ಳೀ ಶಂಕರ್, ಮುಖಂಡರಾದ ತೆಂಗಿನಘಟ್ಟ ಮಂಜು, ಗ್ರಾಪಂ ಸದಸ್ಯ ಕಾಯಿಮಂಜೇಗೌಡ, ಪಾಂಡು, ಕೃಷ್ಣಾಪುರ ಮಿಲ್ ರಾಜಣ್ಣ, ಚೌಡೇನಹಳ್ಳಿ ನಾರಾಯಣಸ್ವಾಮಿ, ಮಾರ್ಗೋನಹಳ್ಳಿ ಶಿವಣ್ಣ ಮತ್ತಿತರರಿದ್ದರು.

ಈ ವೇಳೆ ಪೊಲೀಸ್ ಇನ್ಸ್‌ಪೆಕ್ಟರ್ ದೀಪಕ್ ಮತ್ತು ಜಗದೀಶ್ ನೇತೃತ್ವದಲ್ಲಿ ಬಂದೋಬಸ್ತ್ ಮಾಡಲಾಗಿತ್ತು.

ಪ್ರತಿಭಟನೆಯ ವಿಚಾರ ತಿಳಿದು ಸ್ಥಳಕ್ಕೆ ಮೈಸೂರಿನಿಂದ ಆಗಮಿಸಿದ ರೈಲ್ವೆ ಅಧಿಕಾರಿಗಳು ಅಂಡರ್ ಪಾಸ್ ಬದಲು ಮೇಲ್ಸೇತುವೆ ನಿರ್ಮಿಸಿಕೊಡುವ ಭರವಸೆ ನೀಡಿದ ಮೇರೆಗೆ ಪ್ರತಿಭಟನೆಯನ್ನು ವಾಪಸ್ ಪಡೆದರು.

# ಮಾರಿಮಡೆ ಹಬ್ಬ

**ಬೆಳಕವಾಡಿ:** ಗ್ರಾಮದ ಶ್ರೀಹಿರಿನಾಗರದಮ್ಮ ಮಾರಮ್ಮನಿಗೆ ಬೆಲ್ಲದಅನ್ನ ನೈವೈದ್ಯ ಮಾಡುವ ಮೂಲಕ ಮಾರಿಮಡೆ ಹಬ್ಬವನ್ನು ಬಹಳ ವಿಜೃಂಭಣೆಯಿಂದ ಬೆಳಕವಾಡಿ ಹಾಗೂ ಜವನಗಹಳ್ಳಿ ಗ್ರಾಮಸ್ಥರು ಮಂಗಳವಾರ ಆಚರಿಸಲಾಯಿತು.

ಬಿಜಿಪುರಹೋಬಳಿಯ ಬೆಳಕವಾಡಿ ಹಾಗೂ ಜವನಗಹಳ್ಳಿ ಗ್ರಾಮಸ್ಥರು ಒಟ್ಟಿಗೆ ಸೇರಿ ಆಚರಣೆ ಮಾಡುವ ಮಾರಿಮಡೆಹಬ್ಬವಾಗಿದ್ದು. ಬೆಳಕವಾಡಿ ಗ್ರಾಮದಿಂದ ಸುಮಾರು ಮೂರು ಕೀ.ಮೀ ದೂರದಲ್ಲಿನ ಕಾವೇರಿನದಿ ತೀರದಲ್ಲಿರುವ ಶ್ರೀ ಹಿರಿ ನಾಗರದಮ್ಮ ಮಾರಮ್ಮ(ಚಿಕ್ಕಮಾರಿಗುಡಿ) ಈದೇವಸ್ಥಾನ ಇದ್ದು ಪ್ರತಿವರ್ಷದಂತೆ ಈ ವರ್ಷವು ಸಹ ಬೆಳಕವಾಡಿ ಹಾಗೂ ಜವನಗಹಳ್ಳಿ ಗ್ರಾಮಸ್ಥರು ಅಕ್ಕಿ,ಬೆಲ್ಲ, ಪಾತ್ರೆ ಸೌದೆಯನ್ನು ತೆಗೆದುಕೊಂಡು ಹೋಗಿ ದೇವಸ್ಥಾನದ ಆವರಣದಲ್ಲಿ ತಾತ್ಕಾಲಿಕ ಓಲೆಯನ್ನು ನಿರ್ಮಿಸಿಕೊಂಡು ಬೆಲ್ಲದ ಅನ್ನ ತಯಾರಿಸಿ ನಂತರ ದೇವರಿಗೆ ಪೂಜೆ ಸಲ್ಲಿಸಿ ಗ್ರಾಮಕ್ಕೆ ಬಂದು ನೆಂಟರಿಷ್ಟರಿಗೆ ಊಟ ಬಡಿಸುವುದು ವಾಡಿಕೆಯಗಿದೆ. ಇದೇ ಸಂದರ್ಭದಲ್ಲಿ ಮಾರಮ್ಮ ದೇವರಿಗೆ ಮತ್ತು ಮಾರಮ್ಮಸತ್ತಿಗೆಗೆ ವಿವಿಧ ಹೂಗಳಿಂದ ಅಲಂಕಾರವನ್ನು ಮಾಡಲಾಗಿತ್ತು. ಮಾರಿಮಡೆ ಹಬ್ಬಕ್ಕೆ ಕನಕಪುರ,ಮದ್ದೂರು,ಬೆಂಗಳೂರು,ಮೈಸೂರು,ಕೊಳ್ಳೇಗಾಲ, ಸೇರಿದಂತೆ ವಿವಿಧ ಗ್ರಾಮಗಳಲ್ಲಿ ನೆಲಸಿದ್ದ ನೂರಾರು ಗ್ರಾಮಸ್ಥರು ಹಾಗೂ ಯುವಕರುಗಳು ದೇವಸ್ಥಾನಕ್ಕೆ ಬಂದು ದೇವರ ದರ್ಶನ ಪಡೆದರು.

# ಪಾಂಡವಪುರ ಉಪವಿಭಾಗಾಧಿಕಾರಿಯಿಂದ ಅಕ್ರಮ

## ಸುದ್ದಿಗೋಷ್ಠಿಯಲ್ಲಿ ವಕೀಲ ರವಿಕುಮಾರ್ ಆರೋಪ

**ಪಾಂಡವಪುರ:** ಕೆ.ಆರ್.ಪೇಟೆ ತಾಲೂಕಿನ ಶೀಳನೆರೆ ಗ್ರಾಮದ ಜಯಮ್ಮ ಎಂಬುವವರಿಗೆ ಸೇರಿದ ಕೋಟ್ಯಾಂತರ ಬೆಲೆ ಬಾಳುವ 29 ಗುಂಟೆ ಜಮೀ ನನ್ನು ಲಪಟಾಯಿಸುವ ಉದ್ದೇಶದಿಂದ ಉಪ ವಿಭಾಗಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಅವರು ಜಯಮ್ಮ ಅವರ ಹೆಸರಿನಲ್ಲಿದ್ದ ಖಾತೆಯನ್ನು ಅಕ್ರಮವಾಗಿ ರದ್ದು ಮಾಡಿ ಅದೇಶಿಸಿದ್ದಾರೆ.

ಸಂತ್ರಸ್ತೆ ಜಯಮ್ಮ ಅವರ ಚಿಕ್ಕಮ್ಮ ಬೋರಮ್ಮ ಅವರು ಬರೆಸಿದ್ದ ಮರಣ ಶಾಸನ (ವಿಲ್) ಪತ್ರದ ಆಧಾರದ ಮೇಲೆ ಜಯಮ್ಮ ಅವರ ಹೆಸರಿಗೆ ಖಾತೆ ವರ್ಗಾವಣೆಯಾಗಿದೆ. ಆದರೆ ಈಗ ಜಯಮ್ಮ ಎಂಬುವವರ ಹೆಸರಿನಲ್ಲಿದ್ದ ಖಾತೆಯನ್ನು ರದ್ದು ಗೊಳಿಸಿ ಆದೇಶಿಸಿಸಲಾಗಿದ್ದು, ಜಯಮ್ಮ ಅವರಿಗೆ ಸಂಬಂಧವೇ ಇಲ್ಲದ ದೇವಮ್ಮ ಎಂಬುವವರ ಹೆಸರಿಗೆ ಖಾತೆ ವರ್ಗಾಯಿಸಲು ಸಂಚು ರೂಪಿಸ ಲಾಗಿದೆ. ಖಾತೆ ರದ್ದು ಮಾಡಿರುವುದರ ಹಿಂದೆ ದೊಡ್ಡ ಷಡ್ಯಂತ್ರ ಅಡಗಿದೆ ಎಂದು ಮಂಗಳವಾರ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ಜಯಮ್ಮ ಅವರ ಹೆಸರಿನಲ್ಲಿದ್ದ ಖಾತೆಗೆ ರದ್ದು ಪಡಿಸುವಂತೆ ದೂರುದಾರರ ಸಹಿಯೂ ಕೂಡ ಇಲ್ಲದೆ ದೇವಮ್ಮ ಎಂಬ ಹೆಸರಿನಲ್ಲಿ ಈ ಹಿಂದಿನ ಉಪವಿಭಾಗಾಧಿಕಾರಿ ವಿ.ಆರ್.ಶೈಲಜಾ ಅವರು ಬೋಗಸ್ ವಕಾಲತ್ ದಾಖಲಿಸಿಕೊಂಡಿದ್ದಾರೆ.



ಕೆಆರ್‌ಎಸ್ ಪಕ್ಷದ ಮುಖಂಡರೊಡನೆ ವಕೀಲ ರವಿಕುಮಾರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಬಳಿಕ ಉಪವಿಭಾಗಾಧಿಕಾರಿಯಾದ ಬಿ.ಸಿ.ಶಿವಾನಂದಮೂರ್ತಿ ಅವರು ಖಾತೆದಾರರಾದ ಜಯಮ್ಮ ಅವರಿಗೆ ಯಾವುದೇ ನೋಟಿಸ್ ಜಾರಿಗೊಳಿಸದೆ ಎರಡೇ ಹಿಯರಿಂಗ್‌ನಲ್ಲಿ ಖಾತೆ ರದ್ದು ಪಡಿಸಿದ್ದಾರೆ. ದೇವಮ್ಮ ಎಂಬುವವರ ಹೆಸರಿಗೆ ಖಾತೆ ವರ್ಗಾಯಿಸಲು ಹುನ್ನಾರ ನಡೆಸಿದ್ದು, ಅಧಿಕಾರ ದುರಪಯೋಗಪಡಿಸಕೊಂಡು ಅಕ್ರಮ ದಾಖಲೆ ಗಳನ್ನು ಸೃಷ್ಟಿಸಿ ಅಕ್ರಮ ಎಸಗಿರುವ ಈ ಹಿಂದಿನ ಉಪವಿಭಾಗಾಧಿಕಾರಿ ವಿ.ಆರ್. ಶೈಲಜಾ, ಈಗಿನ ಉಪವಿಭಾಗಧಾದಿಕಾರಿ ಶಿವಾನಂದಮೂರ್ತಿ, ದೇವಮ್ಮ ಪರ ವಕೀಲರಾದ ಎಂ.ಆರ್. ನಾಗೇಗೌಡ, ಪ್ರಭಾಕರ್ ಹಾಗೂ ದೇವಮ್ಮ ಅವರ ವಿರುದ್ಧ ಪ್ರಕರಣ ದಾಖಲಿಸುವಂತೆ ಪೊಲೀಸರಿಗೆ ದೂರು ಸಲ್ಲಿಸಲಾಗಿದೆ ಎಂದು ತಿಳಿಸಿದರು.

**ಜಮೀನು ಮಾರಾಟಕ್ಕೆ ಹುನ್ನಾರ :** ಜಮೀನು ಸದ್ಯದ ಮಾರುಕಟ್ಟೆ ಬೆಲೆ ಒಂದೂವರೆ ಕೋಟಿಗೂ ಅಧಿಕವಾಗಿದ್ದು, ಉಪವಿಬಾಗಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಅಕ್ರಮ ಕೂಟ ರಚಿಸಿಕೊಂಡು ಸಂಬಂಧವಿಲ್ಲದ ವ್ಯಕ್ತಿಯ ಹೆಸರಿಗೆ ಖಾತೆ ವರ್ಗಾಯಿಸಿ ಜಮೀನು ಮಾರಾಟ ಮಾಡ ಲು ಹುನ್ನಾರ ನಡೆಸಿದ್ದಾರೆ. ನಮಗೆ ತಿಳಿದಿರುವ ಮಾಹಿತಿ ಪ್ರಕಾರ ಈಗಾಗಲೇ ಜಮೀನು ಮಾರಾಟ ಮಾಡಿ 25 ಲಕ್ಷ ಮುಂಗಡ ಹಣವನ್ನು ಪಡೆದಿದ್ದಾರೆ. ಈ ಎಲ್ಲವನ್ನು ಗಂಭೀರವಾಗಿ ಪರಿಗಣಿಸಿ ಪ್ರಕರಣ ದಾಖಲಿಸಬೇಕು. ಈ ಬಗ್ಗೆ ತನಿಖೆ ನಡೆಸಿದರೆ ಇನ್ನು ಸಾಕಷ್ಟು ಇಂತಹ ಪ್ರಕರಣಗಳು ಬೆಳಕಿಗೆ ಬರುತ್ತದೆ. ಒಂದು ವೇಳೆ ಪೊಲೀಸರು ಪ್ರಕರಣ ದಾಖಲಿಸದಿದ್ದರೆ ಉಪವಿಭಾಗಾಧಿಕಾರಿ ವಿರುದ್ಧ ನ್ಯಾಯಾಲಯದಲ್ಲಿ ಪಿಸಿಆರ್ ದಾಖಲಿಸಲಾಗುವುದು ಎಂದು ಹೇಳಿದರು. ಈ ಬಗ್ಗೆ ದೂರು ಸ್ವೀಕರಿಸಿರುವ ಪೊಲೀಸರು ಎಡಿಪಿ ಅವರ ಸಲಹೆ ಪಡೆದು ಪ್ರಕರಣ ದಾಖಲಿಸುವುದಾಗಿ ತಿಳಿಸಿರುವುದಾಗಿ ಅವರು ತಿಳಿಸಿದರು.

ಗೋಷ್ಠಿಯಲ್ಲಿ ಕೆಆರ್‌ಎಸ್ ಪಕ್ಷದ ರಾಜ್ಯ ಉಪಾಧ್ಯಕ್ಷ ನಿಂಗೇಗೌಡ, ತಾಲೂಕು ಅಧ್ಯಕ್ಷ ಬಿ.ಕೆ.ವಿಶ್ವನಾಥ್, ಶಾಂತಿಪ್ರಸಾದ್, ರವಿಕುಮಾರ್, ಉಮೇಶ್‌ಗೌಡ, ಮಹೇಂದ್ರಕುಮಾರ್ ಇದ್ದರು.

ಒಂದನೇ ಪುಟದಿಂದ

## ಶರಣ್ಯ ಸಂಸ್ಥೆಯಿಂದ ಆರೈಕೆ

ವಾಗಿಡಲಾಗುತ್ತದೆ. ಈ ಸೇವೆಯು ಯಾವುದೇ ಜಾತಿ ಮತ ಭೇದವಿಲ್ಲದೆ ಬಡವ ಬಲ್ಲಿದನೆಂಬದೆ ಸಂಪೂರ್ಣ ಉಚಿತವಾಗಿ ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ನೀಡಲಾಗುತ್ತದೆ.

ಇಡೀ ಪರಿಸರವನ್ನು ಗಿಡಮರಗಳಿಂದ ತುಂಬಿ ತುಳುಕುತ್ತಾ ಪ್ರಕೃತಿಯ ಕೃಪಾಶೀರ್ವಾದದೊಂದಿಗೆ ಆಯುರ್ವೇದ ಮರಗಳ ವನ ರಾಶಿ ನಕ್ಷತ್ರ ಮತ್ತು ಗ್ರಹಗಳ ಲಕ್ಷ್ಮಿ ಪವಿತ್ರ ವನ ಚಂದ್ರ ಸುಚೇತಾ ಉದ್ಯಾನವನ ಹೀಗೆ ಇಡೀ ಪ್ರದೇಶವನ್ನು ಪ್ರಾಕೃತಿಕವಾಗಿ ಬೆಳೆಸಿಕೊಂಡು ಉತ್ತಮ ಆರೋಗ್ಯದಾಯಕ ವಾತಾವರಣದೊಂದಿಗೆ ಅಭಿವೃದ್ಧಿ ಪಡಿಸಲಾಗಿದೆ .

ಇಂತಹ ರೋಗಿಗಳಿಗೆಂದು ನಿರ್ಮಾಣವಾಗಿರುವ ಆರೈಕೆ ಕೇಂದ್ರ ಇಡೀ ರಾಜ್ಯದಲ್ಲೇ ಎರಡನೆಯದೆಂದು ತಿಳಿಸಲು ಹೆಮ್ಮೆಯೆನಿಸುತ್ತದೆ . ಇದರ ಕಲ್ಪನೆಯೇ ವಿಶೇಷ. ಸಾಧಾರಣವಾಗಿ ರೋಗಿಯನ್ನು ಗುಣಪಡಿಸಲು ಆಸ್ಪತ್ರೆ ಮತ್ತು ಚಿಕಿತ್ಸಾಲಯಗಳು ಚಿರಪರಿಚಿತ ಆದರೆ ರೋಗ ಗುಣಪಡಿಸಲಾಗದೆ ಉಲ್ಬಣ ಸ್ಥಿತಿಯಲ್ಲಿರುವ ವ್ಯಕ್ತಿಗೆ ಆರೈಕೆ ಆಶ್ರಯ ನೀಡಿ ತನ್ನ ಜೀವಿತದ ಉಳಿ ದಿರುವಷ್ಟು ಸಮಯ ವನ್ನು ನೆಮ್ಮದಿಯ ನೋವುರಹಿತ ಪ್ರೀತಿ ಯ ದಿನಗಳನ್ನಾಗಿ ಪರಿವರ್ತಿಸುವ ಈ ಪ್ರಯತ್ನ ನಿಜಕ್ಕೂ ಸವಾಲೇ ಸರಿ.

ಈ ಆರೈಕೆ ಕೇಂದ್ರ ದ ಪ್ರಾರಂಭದ ಕಲ್ಪನೆ ಯೇ ರೋಚಕವಾಗಿದೆ. ಈ ಸೇವೆಯ ಅವ್ಯಕ್ತ ಶಕ್ತಿ ಆದ ದಿವಂಗತ ಡಿ. ಎಸ್. ಲಕ್ಷ್ಮೀ ನಾರಾಯಣ ಶೆಟ್ಟಿ ಅವರು ನಿಧನರಾದ ನಂತರ ಅವರ ಸಾಮಾಜಿಕ ಸೇವೆ ಕಳಕಳಿಯನ್ನು ಸ್ಮರಿಸಿದ ಅವರ ಶ್ರೀಮತಿ ಡೀಲ್ ನೀಲಮ್ಮ ಅವರು ತಮ್ಮ ಕುಟುಂಬದವರೊಂದಿಗೆ ತನ್ನ ಪಾಲಿಗಿರುವ ಆಸ್ತಿಯುನ್ನು ಉಪಯೋಗಿಸಿಕೊಂಡು ಯಾವುದಾದರೂ ಅವಶ್ಯಕವಾದ ಮಾನವೀಯ ಸೇವೆಯ ಬಗ್ಗೆ ಗಮನಹರಿಸಬೇಕೆಂದು ಸಮಾಲೋಚಿಸಿ ಪ್ರತಿಫಲವಾಗಿ ಉಲ್ಬಣಿಸಿದ ರೋಗಿಗಳ ಸೇವೆ ಹಿರಿಯ ನಾಗರಿಕರ ಸೇವೆ ಪಾಲಕರಿಲ್ಲದ ಮಕ್ಕಳ ಸೇವೆ ಮತ್ತು ಅಸಹಾಯಕ ಸ್ತ್ರೀಯರಿಗೆ ಆಶ್ರಯ ಎಂಬ ವಿವಿಧ ಕ್ಷೇತ್ರಗಳ ಸಾಮಾಜಿಕ ಸೇವೆಗೆ ಸಂಕಲ್ಪ ಮಾಡಿ ಶರಣ್ಯಾ ಸೇವಾ ಯೋಜನೆಯ ಮೂಲಕ ಪ್ರಾರಂಭ ವಾಯಿತು..



ನಿತ್ಯಶ್ರೀ

## ತರಬೇತಿ ಅತ್ಯಗತ್ಯ

ಮಹತ್ವಪೂರ್ಣವಾದದ್ದು, ಇದರಿಂದ ಹೆಣ್ಣು ಮಕ್ಕಳಿಗೆ ಆತ್ಮರಕ್ಷಣಾ ಕೌಶಲ್ಯದ ಜೊತೆಗೆ ಆತ್ಮಸ್ಥೈರ್ಯವೂ ಹೆಚ್ಚುತ್ತದೆ. ವಿದ್ಯಾರ್ಥಿನಿಯರಿಗೆ ಆತ್ಮ ವಿಶ್ವಾಸ ತುಂಬುವುದು ಈ ತರಬೇತಿಯ ಮೂಲ ಉದ್ದೇಶವಾಗಿದೆ. ಓಬವ್ವ, ನಾರಿ ಶಕ್ತಿಯ ಸಂಕೇತ ಅವರ ಧೈರ್ಯ ಸಾಹಸ ನಾಡು ನುಡಿಗೆ ಪ್ರೇರಣೆಯಾಗಿದೆ. ಹಾಗಾಗಿ ತರಬೇತಿಗೆ ಓಬವ್ವರ ಹೆಸರನ್ನೇ ಇಡಲಾಗಿದೆ ಎಂದರು.

ಜಿಲ್ಲೆಯಲ್ಲಿ 5588 ವಿದ್ಯಾರ್ಥಿನಿಯರಿಗೆ ಸುಮಾರು 49 ತರಬೇತುದಾರರಿಂದ 94 ತಂಡಗಳನ್ನು ಮಾಡಿ ತರಬೇತಿಗಳನ್ನು ನೀಡಲಾಗುತ್ತಿದ್ದೂ ಇದು ಶ್ಲಾಘನೀಯ, ಹಾಗೂ ಸರ್ಕಾರಕ್ಕೆ ಇದು ಹೆಮ್ಮೆಯ ವಿಚಾರ ಎಂದರು.

ಅನೇಕ ಸ್ತ್ರೀ ಮಹನೀಯರು ನಡೆದಂತಹ ಪುಣ್ಯ ಭೂಮಿ ಇದು ಸ್ತ್ರೀ ಎಂದರೆ ಇಡಿ ಸಮಾಜವನ್ನೇ ನಡೆಸುವ ಒಂದು ಶಕ್ತಿ, ಕಿತ್ತೂರು ರಾಣಿ ಚೆನ್ನಮ್ಮ, ಝಾನ್ಸಿ ರಾಣಿ ಲಕ್ಷ್ಮೀಬಾಯಿ, ಒನಕೆ ಓಬವ್ವ ರಂತಹ ಮಹನೀಯರು ನಮಗೆಲ್ಲರಿಗೂ ಮಾದರಿಯಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ನಗರ ಸಭೆಯ ಅಧ್ಯಕ್ಷರಾದ ಹೆಚ್. ಎಸ್. ಮಂಜು, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಬಿ. ರಂಗೇಗೌಡ, ಸಹಾಯಕ ನಿರ್ದೇಶಕರಾದ ಕಾವ್ಯ ಶ್ರೀ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳಾದ ಜಿ. ಎಸ್.ಸೋಮಶೇಖರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣ ಅಧಿಕಾರಿ ಎಸ್. ಆರ್.ಹರೀಶ್, ಉಪ ವಿಭಾಗಾಧಿಕಾರಿ ಐಶ್ವರ್ಯ, ತಹಶೀಲ್ದಾರರಾದ ಚಂದ್ರ ಶೇಖರ್ ಸಂ.ಗಾಳಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಜೀವನ ಭದ್ರತೆ

ದಿನಾಚರಣೆಯ ಅಂಗವಾಗಿ ಕೂಲಿಕಾರರಿಗೆ ಕೇಕ್ ಕತ್ತರಿಸಿ ಸಿಹಿ ಹಂಚಲಾಯಿತು.

ಮಾನ್ಯ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಈ ವೇಳೆ ಮಂಗಲ, ಸೂನಗನಹಳ್ಳಿ, ಹಳುವಾಡಿ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ನರೇಗಾ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇದೇ ಸಂದರ್ಭದಲ್ಲಿ ಕಾರ್ಯನಿರ್ವಾಹಕಾ ಧಿಕಾರಿಗಳಾದ ಎ.ಬಿ ವೇಣು , ಸಹಾಯಕ ನಿರ್ದೇಶಕರಾದ ಹೆಚ್.ಆರ್ ಶ್ರೀನಿವಾಸ್, ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರುಗಳು, ಎಡಿಪಿಸಿ ಮುನಿರಾಜು, ಡಿಎಂಐಎಸ್ ರಶ್ಮಿ, ತಾಂತ್ರಿಕ ಸಂಯೋಜಕರು, ಐಇಸಿ ಸಂಯೋಜಕರು, ತಾಂತ್ರಿಕ ಸಹಾಯಕರು ಗಳು, ಬಿಎಫ್ಟಿಗಳು, ಗ್ರಾಮ ಕಾಯಕ ಮಿತ್ರರು ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಜರಿದ್ದರು.

ಬೇಕಾಗಿದ್ದಾರೆ

ಶ್ರೀಲಕ್ಷ್ಮೀ ವೆಲ್‌ನೆಸ್ ಆಯುರ್ವೇದ ಪ್ರಾಡಕ್ಟ್‌ಗಳನ್ನು ಸೇಲ್ ಮಾಡಲು ಸೇಲ್ಸ್ ಗರ್ಲ್ಸ್ ಹಾಗೂ ಸೇಲ್ಸ್ ಬಾಯ್ಸ್ ಬೇಕಾಗಿದ್ದಾರೆ. ನಮ್ಮಲ್ಲಿ ಹೋಂ ಪ್ರಾಡಕ್ಟ್, ಹೆಲ್ತ್ ಪ್ರಾಡಕ್ಟ್ಸ್ ಹಾಗೂ ಅಗ್ರಿ ಪ್ರಾಡಕ್ಟ್ಸ್ ಹೋಲ್‌ಸೇಲ್ ದರದಲ್ಲಿ ಸಿಗುತ್ತದೆ. ಶಿವರಾತ್ರಿ ಹಬ್ಬದ ಪ್ರಯುಕ್ತ 30% ಭಾರೀ ರಿಯಾಯಿತಿ ದೊರೆಯುತ್ತದೆ. ಈ ಸದಾವಕಾಶವನ್ನು ಬಳಸಿಕೊಳ್ಳಿ, ಸ್ವದೇಶಿ ಬಳಸಿ, ಹಾಗೂ ಉಳಿಸಿ.... ಸಂಪರ್ಕಿಸಿ:
8892183749 8123612492

Published and Owned by : Smt. ARUNAJYOTHI,B.K. From No.292, Basaveshwara Nilaya, Basaveshwara Maarga, Kaveri Nagar, Mandya. Printed by : JAYALAKSHMAMMA, Kavana Complex, GuthaluRoad, Mandya-571404, Mandya Dist., Karnataka, Editor : ARUNAJYOTHI.B.K.